EMAIL : dairyadadaari@gmail.com ಸಂಪುಟ: 01 ಸಂಚಿಕೆ: 44
ಬೆಲೆ ರೂ : 2.00
ರಾಯಚೂರು
ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಗುರುವಾರ: 22-01-2026

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಶಾಸಕಿ ಕರೆಮ್ಮಗೆ ಬೆದರಿಕೆ ಆರೋಪಿಗಳ ಬಂಧನಕ್ಕೆ ಜೆಡಿಎಸ್ ಆಗ್ರಹ

**ಬೆಂಗಳೂರು,ಜ.21–** ದೇವದುರ್ಗದ ಶಾಸಕರಾದ ಕರೆಮ್ಮ ಜಿ. ನಾಯಕ ಅವರಿಗೆ ಬೆದರಿಕೆ ಹಾಕಿರುವ ಮರಳು ಮಾಫಿಯಾ ದಂಧೆಕೋರರನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಜರುಗಿಸಬೇಕು ಎಂದು ಜೆಡಿಎಸ್ ಆಗ್ರಹಿಸಿದೆ. ಜೆ.ಪಿ.ಭವನದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಾಜಿ ಸಚಿವ ವೆಂಕಟರಾವ್ ನಾಡಗೌಡ ಅವರು, ಕರೆಮ ಅವರಿಗೆ ಸರ್ಕಾರ ಸೂಕ್ತ ರಕ್ಷಣೆ ಕೊಡಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ಬೆದರಿಕೆ ಹಾಕಿದವರನ್ನು ಬಂಧಿಸದಿದ್ದರೆ ತೀವ್ರ ಸ್ವರೂಪದ ಹೋರಾಟ ನಡೆಸಲಾಗುವುದು ಎಂದು ಹೇಳಿದ ಅವರು, ಕರೆಮ್ಮ ಅವರ ಮನೆಗೆ ಬಂದು ಪ್ರೊಲೀಸರ ಸಮುಖದಲ್ಲೆ ಬೆದರಿಕೆ ಹಾಕಿದ್ದಾರೆ. ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪ್ರೊಲೀಸ್ ಎಸ್ಪಿ ಅವರಿಗೂ ಮನವಿ ಮಾಡಿದ್ದರೂ ಕೇವಲ ಎಫ್‌ಐಆರ್ ಮಾತ್ರ ದಾಖಲಿಸಲಾಗಿದೆ. ಬೆದರಿಕೆ ಹಾಕಿದವರನ್ನು ಬಂಧಿಸಿಲ್ಲ ಎಂದು ಆರೋಪಿಸಿದರು.

ಶಿಡ್ಲಘಟ್ಟ ನಗರಸಭೆ ಪೌರಾಯುಕ್ತೆಗೆ ಅವಾಚ್ಯ ಶಬ್ದಗಳಿಂದ ನಿಂದಿಸಿದ ಆರೋಪಿಗಳನ್ನು ಇನ್ನೂ ಬಂಧಿಸಿಲ್ಲ. ಮೈಸೂರಿನಲ್ಲೂ ಮಹಿಳಾ ಅಧಿಕಾರಿಗೆ ನಿಂದಿಸಿ, ಬೆದರಿಸಲಾಗಿದೆ. ಸರ್ಕಾರದಿಂದ ಯಾವುದೇ ಕ್ರಮ ಇಲ್ಲ. ಮಹಿಳಾ ಆಯೋಗವು ನಿಷ್ಕ್ರಿಯವಾಗಿದೆ ಎಂದು ಆರೋಪಿಸಿದರು. ಸರ್ಕಾರ ಶಾಸಕಿ ಕರೆಮ್ಮ ಅವರ ರಕ್ಷಣೆಗೆ ಮುಂದಾಗದಿದ್ದರೆ ಹೋರಾಟ ಮಾಡುವುದು ಅನಿವರ್ಯವಾಗಲಿದೆ ಎಂದು ಹೇಳಿದರು.

ಜೆಡಿಎಸ್ ಮಹಿಳಾ ಘಟಕದ ಅಧ್ಯಕ್ಷೆ ರಶಿ ರಾಮೇಗೌಡ ಮಾತನಾಡಿ,



ಕೃಷ್ಣಾ ನದಿಯಲ್ಲಿ ಮರಳು ದಂಧೆ ನಿಲ್ಲಿಸಲು ಹೇಳಿದ್ದ ನಮ ಪಕ್ಷದ ಶಾಸಕರಾದ ಕರೆಮ್ಮ ಅವರಿಗೆ ಪ್ರೊಲೀಸರ ಸಮುಖದಲ್ಲೆ ಬೆದರಿಕೆ ಹಾಕಿದ್ದಾರೆ. ದಾಖಲೆಸಹಿತ ದೂರು ನೀಡಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಟೋಲ್‌ಗೇಟ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ಕರೆಮ ಮತ್ತು ಅವರ ಕುಟುಂಬದವರ ಮೇಲೆ ಕೇಸು ದಾಖಲಿಸಲಿದ್ದಾರೆ. ಬೆದರಿಕೆ ಹಾಕಿದವರಿಗೆ ಬಂಧಿಸಿ ಕ್ರಮ ಕೈಗೊಳ್ಳಲಿಲ್ಲ ಎಂದು ಆರೋಪಿಸಿದರು.ಬೆದರಿಕೆ ಹಾಕಿದ್ದಾರೆ ಎನ್ನಲಾದ ವಿಡಿಯೋ ಪ್ರರ್ಶಿಸಿದ ಅವರು, ಕರೆಮ್ಮ ಅವರಿಗೆ ಏನಾದರೂ ತೊಂದರೆಯಾದರೆ ಸರ್ಕಾರವೇ ಹೊಣೆಯಾಗುತ್ತದೆ. 2ನೇಪುಟಕ್ಕೆ ►

## ಗ್ರಾಮೀಣ ಪ್ರದೇಶದಲ್ಲಿ ಜನವರಿ 23ರಂದು ವಿದ್ಯುತ್ ವ್ಯತ್ಯಯ

ಧೈರ್ಯದ ದಾರಿ

**ರಾಯಚೂರು,ಜ.21–** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ಪುಚ್ಚಲದಿನ್ನಿ ಮತ್ತು ಮಿಡಗಲದಿನ್ನಿ ಫೀಡರ್‌ಗಳಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜನವರಿ 23ರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆವರೆಗೆ ಮಿಡಗಲದಿನ್ನಿ, ಪುಚ್ಚಲದಿನ್ನಿ, ಗುಂಜಳ್ಳಿ, ಉಪ್ರಾಳ, ಗೋಡಿಹಾಳ ಮತ್ತು ಅಲ್ಕೂರು ಗ್ರಾಮಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಲಾಗಿದೆ

## ಸಹಕಾರ ಭಾರತಿ ಸಮಾಲೋಚನೆ ಹಾಗೂ ನೋಂದಣಿ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ,ಜ.21–** ಪಟ್ಟಣದ ಶ್ರೀ ವಿರೂಪಾಕ್ಷೇಶ್ವರ ಸೌಹಾರ್ದ ಸಹಕಾರಿಯ ಸಭಾಂಗಣದಲ್ಲಿ ರಾಯಚೂರು ಜಿಲ್ಲಾ ಸಹಕಾರ ಭಾರತಿ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ನಡೆದ ಸಮಾಲೋಚನೆ ಹಾಗೂ ನೋಂದಣಿ ಕಾರ್ಯಕ್ರಮ ಸಹಕಾರ ಭಾರತಿ ರಾಜ್ಯ ಕಾರ್ಯಕಾರಣಿ ಸದಸ್ಯರಾದ ಅಮರೇಗೌಡ ನಕ್ಕುಂದಿ ರವರು ಸಹಕಾರ ಭಾರತೀಯ ಸಂಸ್ಥಾಪಕ ಅಧ್ಯಕ್ಷರಾದ ಲಕ್ಷ??ಣರಾವ್ ಇನಾಂದರ್ ರವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸುವ ಮೂಲಕ ಚಾಲನೆ ನೀಡಿ ಮಾತನಾಡಿ ರಾಜ್ಯದಲ್ಲಿ ಸಹಾಕರಿ ಸಂಸ್ಥೆಗಳ ಬೆಳವಣಿಗೆಯಲ್ಲಿ ಅಂಗ ಸಂಸ್ಥೆಯಾಗಿ ಸಹಕಾರ ಭಾರತಿ ಕಾರ್ಯನಿರ್ವಹಿಸುತ್ತಿದೆ ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರನ್ನು ನೋಂದಾಯಿಸಿಕೊಂಡು ತಾಲೂಕಿನ ಸಹಕಾರ ಭಾರತಿ ಸಂಸ್ಥೆಯ ಪದಾಧಿಕಾರಿಗಳನ್ನು ಆಯ್ಕೆಮಾಡಲಾಗುವುದು ಎಂದು ತಿಳಿಸಿದರು.

ಮಾನವಿ ಪಟ್ಟಣ ಸಹಕಾರಿ ಸೌಹಾರ್ದ ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಹಕ ಅಧಿಕಾರಿಗಳಾದ ನಾಗರಾಜ್ ಮಾತನಾಡಿ 1978 ರಲ್ಲಿ ಸಹಕಾರ ಭಾರತಿ ಸ್ಥಾಪನೆಯಾಗಿದ್ದು ಸಹಕಾರ ಭಾರತಿ ಸಹಕಾರಿ ಸಂಸ್ಥೆಗಳ ಸಹಕಾರಿಗಳ ಜವಾಬ್ದಾರಿಗಳನ್ನು ಹಿತಾಸಕ್ತಿಯನ್ನು ಕಾಪಾಡುವಲ್ಲಿ ಶ್ರಮಿಸುತ್ತಿದೆ. ಸಂಸ್ಕಾರ ಮತ್ತು ಸಹಕಾರ ಇಲ್ಲದೆ ಉದ್ದಾರ ಸಾಧ್ಯವಿಲ್ಲ ಎನ್ನುವುದು ಸಹಕಾರ ಭಾರತಿಯ ಮೂಲ ಆಶಾಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆರ್.ಕೆ.ಡಿ.ಸಿ.ಸಿ. ಬ್ಯಾಂಕಿನ ನಿರ್ದೇಶಕರಾದ ಮಲ್ಲನಗೌಡ ನಕ್ಕುಂದಿ, ಕಲಬುರ್ಗಿ ವಿಭಾಗೀಯ ಸಂಘಟನಾ ಕಾರ್ಯದರ್ಶಿ ರಾಜಕುಮಾರ್. ಜಿಲ್ಲಾ ಪ್ರ. ಕಾರ್ಯದರ್ಶಿ ಬಸವರಾಜ. ಬಿ, ಜಿಲ್ಲಾ ಮಹಿಳಾ ಪ್ರಮುಖ್ ರಾದ ನಾಗರತ್ನಮ್ಮ ಪಾಟೀಲ, ತಾಲೂಕಿನ ವಿವಿಧ ಸಹಕಾರಿ ಸಂಸ್ಥೆಯ ಅಧ್ಯಕ್ಷರಾದ ಆರ್. ಬಸವರಾಜ್, ರವಿಕುಮಾರ್ ಪಾಟೀಲ್ ವಕೀಲರು, ಮುತ್ತಣ್ಣ,ಹೆಚ್.ಮೌನೇಶ್ ಗೌಡ , ವಿವಿಧ ಸಹಕಾರಿ ಸಂಸ್ಥೆಗಳ ಕಾರ್ಯನಿರ್ವಹಕ ಅಧಿಕಾರಿಗಳಾದ ಶಂಕರಾನಂದ,ಅಜೇಯ್ ಕುಮಾರ್, ದೇವರಾಜ ಪ್ರೊತ್ನಾಳ್ ಸೇರಿದಂತೆ ತಾಲೂಕಿನ ವಿವಿಧ ಸಹಕಾರಿ ಸಂಸ್ಥೆಗಳ ಪದಾಧಿಕಾರಿಗಳು , ಸಿಬ್ಬಂದಿಗಳು ಭಾಗವಹಿಸಿದರು.

## ಉಟಕನೂರು ಗ್ರಾಮಪಂಚಾಯಿತಿಯ ಪ್ರಭಾರಿ ಅಧ್ಯಕ್ಷರಾಗಿ ಬಸ್ಸಮ್ಮ ಪಂಪಾಪತಿ ಅಧಿಕಾರ ಸ್ವೀಕಾರ



ಧೈರ್ಯದ ದಾರಿ

**ಮಾನ್ವಿ,ಜ.21–**ತಾಲೂಕಿನ ಉಟಕನೂರು ಗ್ರಾಮಪಂಚಾಯಿತಿಯ ಪ್ರಭಾರಿ ಅಧ್ಯಕ್ಷರಾಗಿ ಉಪಾಧ್ಯಕ್ಷೆ ಬಸ್ಸಮ್ಮ ಪಂಪಾಪತಿ ಇಂದು ಅಧಿಕಾರ ವಹಿಸಿಕೊಂಡು ಗ್ರಾ.ಪಂ. ವಿಶೇಷ ಸಭೆ ನಡೆಸಿ ಮಾತನಾಡಿ ಗ್ರಾಮದ ಅಭಿವೃದ್ದಿಗೆ ಸದಸ್ಯರ ಸಹಕಾರದೊಂದಿಗೆ ಗ್ರಾ.ಪಂ.ಗೆ ಸರ್ಕಾರದಿಂದ ದೊರೆಯುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಗ್ರಾಮದ ಜನರಿಗೆ ಅಗತ್ಯ ಮೂಲ ಸೌಕರ್ಯವನ್ನು ಕಲ್ಪಿಸುವುದಕ್ಕೆ ಶ್ರಮಿಸಲಾಗುವುದು ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಅವಧಿ ಕೇವಲ ಫೆ.3 ರವರೆಗೆ ಇದ್ದರು ಕೂಡ ಎಂ.ಬಸವಲಿಂಗ ನಾಯಕ್ ಉದ್ಬಾಳ್ ರವರು ಗ್ರಾಮಪಂಚಾಯಿತಿ ಅಧ್ಯಕ್ಷರಾಗಿದ್ದ ಈರಮ್ಮ ಅಮರಪ್ಪ ರವರ ಸದಸ್ಯತ್ವ ರದ್ದು ಕೋರಿ ಕಲ್ಬುರ್ಗಿ ಉಚ್ಚ ನ್ಯಾಯಾಲಯ ದ್ವಿಸದಸ್ಯ ಪೀಠದಲ್ಲಿ ಮೇಲ್ಮನವಿಯನ್ನು ಸಲ್ಲಿಸಿದ್ದರಿಂದ ಕಲ್ಬುರ್ಗಿ ಉಚ್ಚ ನ್ಯಾಯಾಲಯ ದ್ವಿಸದಸ್ಯ ಪೀಠವು ಮೇಲ್ಮನವಿಯನ್ನು ಪುರಸ್ಕರಿಸಿ ಸದಸ್ಯತ್ವ ರದ್ದು ಪಡಿಸಿದ್ದರಿಂದ ತೆರವಾಗಿರುವ ಅಧ್ಯಕ್ಷರ ಹುದ್ದೆಗೆ ಪ್ರಭಾರಿ ಅಧ್ಯಕ್ಷರಾಗಿ ಬಸ್ಸಮ್ಮ ಪಂಪಾಪತಿ ಇಂದು ಅಧಿಕಾರ ವಹಿಸಿಕೊಂಡರು.

ಉಟಕನೂರು ಪಿ.ಡಿ.ಓ. ಜುಬೆರ್ ನಾಯ್ಕ್, ಕಾರ್ಯದರ್ಶಿ ಬಸವರಾಜ್, ದೇವೇಂದ್ರಪ್ಪ, ಸೇರಿದಂತೆ ಗ್ರಾ.ಪಂ. ಸದಸ್ಯರು, ಹಾಗೂ ಸಿಬ್ಬಂದಿಗಳು

## ಅದ್ದೂರಿಯಾಗಿ ಜರುಗಿದ ಶ್ರೀ ನಿಜ ಶರಣ ಅಂಬಿಗರ ಚೌಡಯ್ಯನವರ ಜಯಂತಿ



ಧೈರ್ಯದ ದಾರಿ

**ಅರಕೇರಾ,ಜ.21–**ಕೋತ್ತದೊಡ್ಡಿ ಗ್ರಾಮದಲ್ಲಿ ಶ್ರೀ ನಿಜ ಶರಣ ಅಂಬಿಗರ ಚೌಡಯ್ಯನವರ 906 ನೇ ಜಯಂತಿ ಅಂಗವಾಗಿ ಇಂದು ಗ್ರಾಮದಲ್ಲಿ ಶ್ರೀಚೌಡೇಶ್ವರ ದೇವಿ ದೇವಸ್ಥಾನದಿಂದ ಭವ್ಯ ಮೇರವಣಿಗೆ ಟ್ರ್ಯಾಕ್ಟರ್ ಅಲಂಕಾರ ಗೊಂಡಿರುವ ವಾಹನದಲ್ಲಿ ಭಾವ ಚಿತ್ರವನ್ನು ಅದ್ದೂರಿಯಾಗಿ ಮೇರವೇಣಿಗೆ ಮೂಲಕ ಪ್ರಮುಖ ರಸ್ತೆಯಲ್ಲಿ ಸಮಾಜದ ಹಾಗೂ ಗ್ರಾಮದ ಸುಮಂಗಲೆಯರು 101 ಘರ್ಣ ಕೂಂಭ ಕಳಶದೊಂದಿಗೆ ಬಾಜಿ ಬಜಂತ್ರಿ ಡೊಳ್ಳು ವ್ಯಾದಗಳೊಂದಿಗೆ ಕೊತ್ತದೊಡ್ಡಿ ಗ್ರಾಮದ ಹೊರವಲಯದಲ್ಲಿರುವ ಶ್ರೀಅಂಬಿಗರ ಚೌಡಯ್ಯನವರ ವೃತದವರಿಗೂ ಭವ್ಯ ಮೇರವಣಿಗೆ ಮೂಲಕ ಗ್ರಾಮಸ್ಥರು ಅಂಬಿಗರ ಚೌಡಯ್ಯನವರ ವಚನಗಳನ್ನು ಧ್ವನಿವರ್ದಕ ಮೂಲಕ ಆಲಿಸಿಸುತ್ತಾ ಸಾಗಿದರು.

ಗ್ರಾಮದಲ್ಲಿನ ಸಮಾಜದವರು ಹಾಗೂ ಗ್ರಾಮಸ್ಥರು, ಜನಪ್ರತಿನಿಧಿಗಳು,ಯುವಕರು ಇತರರು ಸೇರಿದಂತೆ ಅಂಬಿಗರ ಚೌಡಯ್ಯನವರ ವೃತದಲ್ಲಿನ ನಾಮಫಲಕ ವಿರುವ ಭಾವ ಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಲಾಯಿತು.

ಸಂದರ್ಭದಲ್ಲಿಕೆಂಚಣ್ಣಪೂಜಾರಿ,ಹನುಮಂತ್ರಾಯಪೂಜಾರಿ,ಅಂಜನೇಯ್ಯಕಂದಳಿತಾಲೂಕುಹಿಂದುಳಿದವರ್ಗಗಳ ಉಪಾಧ್ಯಕ್ಷರು, ಗೋವಿಂದರಾಜನಾಯಕಿಕ ಚಿಕ್ಕಗುಡ್ಡ ಮಾಜಿ ತಾ.ಪಂ.ಸದಸ್ಯರು. ಕೆ.ಮಲ್ಲು ಅಂಭಿಗರಚೌಡಯ್ಯ ರಿಯರಾದ ಹನುಂತ್ರಾಯನಾಯಕ ಮಟ್ಲ, ಭೀಮಣ್ಣ ದೊಂಡಂಬಳ್ಳಿ,ಭೀಮಪ್ಪದಾಸರ,ಬಾಲಪ್ಪ ಕಂದಳ್ಳಿ, ನಾಗಪ್ಪಗೌಡಪೋಲಿಸ್ ಪಾಟೀಲ್, ಬಜ್ಜಯ್ಯಗೌಡ, ಹನುಂತ್ರಾಯ ಚಿಕ್ಕಗುಡ್ಡ, ಹನುಮಂತಭಾವಿಮನಿ, ದೇವಿಂದ್ರಗಾಲಿ,ಹನುಂತ್ರಾಯಗುಜುಮ,. ಬೀಮಣ್ಣಚಿಕ್ಕಗುಡ್ಡ ಎಸ್ ಡಿ ಎಂಸಿ ಅಧ್ಯಕ್ಷರು, ಹನುಂತ್ರಆಯಕರಿಗುಡ್ಡ, ಅಂಬ್ರೇಶ ಗುಂತಗುಳಿ, ಪ್ರಭುರಾಯ ಚಿಕ್ಕಗುಡ್ಡ, ಹನುಮಂತ್ರಾಯಮಸ್ಕಿ, ಮಹಾದೇವಪ್ಪ ಕಂದಳ್ಳಿ,ಅಯ್ಯಳಪ್ಪಮಾನ್ವಿ, ವಡಿಕೇಶ್‌ಮಾನ್ವಿ, ಬಸವರಾಜ ಗೋರ್ಕಲ್,ಶಿವಣ್ಣಕಂದಳ್ಳಿ, ಮುದಕಪ್ಪ,ಹೊನ್ನಪ್ಪದೊಂಡಂಬಳ್ಳಿ ,ಆದೇಪ್ಪ ಕಂದಳ್ಳಿ,ಶರಣಬಸವ, ಮಂಜುನಾಥ ತೆಲಗರ್,ಹನುಮರಡ್ಡಿ ಮಾನ್ವಿ ಭೀಮಶೆಪ್ಪ, ನವಶಪ್ಪ ದಾಸರ, ಹನುಮಂತ್ರಾಯ ತೆಲಗರ ಸಾಬಯ್ಯ ಗಬ್ಬೂರ,ಬೀಮಣ್ಣಕಂಕರ, ಮಾರೆಪ್ಪ ಭೋವಿ , ಭೀಮಣ್ಣ ಗುತ್ತೆದಾರ, ಸಾಬಣ್ಣ,ನಾಗಪ್ಪಭಾವಿಮಾನಿ, ಸಿದ್ದುಪಮಗೇನ್ ಸೇರದಿಂತೆ ಗ್ರಾಮಸ್ಥರು ಯುವಕರು ಉಪಸ್ಥಿತರಿದ್ದರು.

ಅತ್ಯಂತ ಸಂಭ್ರಮದಿಂದ ಕಾರ್ಯಕ್ರಮ ಜರುಗಿತುಕಾರ್ಯಕ್ರಮದಲ್ಲಿ ಎಲ್ಲಾ ಸಮಾಜದ ಬಾಂದವರು ಭಾಗವಹಿಸಿದ್ದರು ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾರಿಗೂ ಗೋಧಿ ಊಗ್ಗಿ ಅನ್ನ ಸಾಂಬಾರು ಊಟದ ವ್ಯವಸ್ಥೆ ಅಚ್ಚುಕಟ್ಟಾಗಿ ಮಾಡಿದ್ದರು.

## ನಿಜಶರಣ ಅಂಬಿಗಾರ ಚೌಡಯ್ಯನವರ ಜಯಂತಿ ಆಚರಣೆ



ಧೈರ್ಯದ ದಾರಿ

**ಮಾನ್ವಿ,ಜ.21–** ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ನಿಜಶರಣ ಅಂಬಿಗಾರ ಚೌಡಯ್ಯ ಜಯಂತಿ ಅಂಗವಾಗಿ ನಿಜಶರಣ ಅಂಬಿಗಾರ ಚೌಡಯ್ಯನವರ ಭಾವಚಿತ್ರಕ್ಕೆ ಪ್ರೂಜೆ ಸಲ್ಲಿಸಿ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ 12 ನೇ ಶತಮಾನದಲ್ಲಿ ಶರಣರು ಪ್ರಪಂಚಿಕ ಜೀವನದ ಪರಿಕಲ್ಪನೆಯನ್ನು ಅನುಭವ ಮಂಟಪದ ಮೂಲಕ ನಮ್ಮಗೆ ಮೂಡಿಸಿದ್ದರೆ ವಚನ ಎಂದರೆ ಶರಣರು ಅಂದು ಮಾತಿನ ಮೂಲಕ ನೀಡಿದ ಪ್ರಮಾಣವನ್ನು ವಚನ ಎಂದು ಕರೆಯಲಾಗುತ್ತದೆ. ಶರಣರಲ್ಲಿ ಅಂಬಿಗಾರ ಚೌಡಯ್ಯನವರು ನಿಜಶರಣರೆಂದು ಹೆಸರನ್ನು ಪಡೆದಿದ್ದಾರೆ.

ಇವರ ವಚನಗಳಲ್ಲಿ ಸಾಮಾಜಿಕ ವ್ಯವಸ್ಥೆಯ ವಿಡಂಬನೆಯನ್ನು ಕಾಣಬಹುದಾಗಿದೆ. ಇಂದಿಗೂ ಕೂಡ ವಚನಗಳ ತಾರ್ಕಿಕತೆಯನ್ನು ಕಂಡು ಹಿಡಿಯುವುದಕ್ಕೆ ಸಾಧ್ಯವಾಗಿಲ್ಲ ಅಂತಹ ಶರಣರ ವಚನಗಳನ್ನು ನಮ್ಮ ಮುಂದಿನ ಪಿಳಿಗೆಗೆ ತಲುಪಿಸುವ ಕಾರ್ಯವನ್ನು ನಾವು ಮಾಡಬೇಕಾಗಿದೆ ಅಂಬಿಗಾರ ಚೌಡಯ್ಯನವರ ಜೀವನ ಹಾಗೂ ತತ್ವ ಅದರ್ಶಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದು ತಿಳಿಸಿದರು.

ಬಸವರಾಜ ಚೌಡ್ಲಿ ರವರು ನಿಜಶರಣ ಅಂಬಿಗಾರ ಚೌಡಯ್ಯನವರ ಜೀವನ ಮತ್ತು ತತ್ವ ಅದರ್ಶಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್, ತಾ.ಗಂಗಮತಸ್ಥರಸಮಾಜದ ಅಧ್ಯಕ್ಷರಾದ ವೆಂಕಟೇಶ ಸುಂಕೇಶ್ವರ, ಗೌ.ಅಧ್ಯಕ್ಷರಾದ ನಾಗೇಶ ಕಬ್ಬೆರ, ಬೀಮರಾಯ ಸೀತಮನಿ, ನಿವೃತ್ತ ಎ.ಎಸ್.ಐ. ಈರಪ್ಪ, ಕಾರ್ಯದರ್ಶಿ ಮಂಜುನಾಥ ಮಾಡಗಿರಿ ,ಬಸಪ್ಪ,ಮಹಾದೇವಪ್ಪ,ಕಾಶಿನಾಥ, ತಾಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಇನ್ನಿತರರು ಇದ್ದರು.

# ಅಂಬಿಗರ ಚೌಡಯ್ಯನವರ ಜೀವನ ಮೌಲ್ಯಗಳನ್ನು ಅರಿಯೋಣ: ಸಚಿವ ಎನ್.ಎಸ್.ಬೋಸರಾಜು ಸಲಹೆ

ಧೈರ್ಯದ ದಾರಿ

**ರಾಯಚೂರು,ಜ.21–** ಸಮಾಜದಲ್ಲಿನ ಅನಾಚಾರ, ಅಪನಂಬಿಕೆಗಳನ್ನು ನಿರ್ಭೀತಿಯಿಂದ ಟೀಕಿಸಿ ಕ್ರಾಂತಿಕಾರಿ ಶರಣರು ಎಂದು ಹೆಸರಾದ ನಿಜಶರಣ ಅಂಬಿಗರ ಚೌಡಯ್ಯನವರ ಆಚಾರ–ವಿಚಾರಗಳನ್ನು ನಾವೆಲ್ಲರು ಅರಿತು ನಡೆಯಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಹೇಳಿದರು.

ಜನವರಿ 21ರ ಬುಧವಾರ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ನಿಜಶರಣ ಅಂಬಿಗರ ಚೌಡಯ್ಯ ಅವರು ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಂಬಿಗರ ಚೌಡಯ್ಯನವರು ತಮ್ಮ ವಚನ ಸಾಹಿತ್ಯದ ಮೂಲಕ ಸಮಾಜದಲ್ಲಿ ಸಮಾನತೆಯನ್ನು ಎತ್ತಿ ಹಿಡಿದರು. ಬಸವಣ್ಣನವರ ಅನುಯಾಯಿಗಳಾದ ಅಂಬಿಗರ ಚೌಡಯ್ಯನವರ ವಚನಗಳಲ್ಲಿ ಜೀವನದ ಸಾರವೇ ಅಡಗಿದೆ ಎಂದು ತಿಳಿಸಿದರು.

ಈ ವೇಳೆ ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಮಾತನಾಡಿ, ಅಂಬಿಗರ ಚೌಡಯ್ಯನವರು ವಚನಗಳ ಮೂಲಕ ಸಮಸಮಾಜ ಕಟ್ಟುವ ಕೆಲಸ ಮಾಡಿದರು ಎಂದು ತಿಳಿಸಿದರು. ಬಹುಸಂಖ್ಯಾತರಾದ ಗಂಗಾಮಸ್ಥರಿಗೆ ಸಮಾಜದಲ್ಲಿ ಸರಿಯಾದ ರೀತಿಯಲ್ಲಿ ಪ್ರಾತಿನಿಧ್ಯ ಸಿಗಬೇಕು. ಈ ನಿಟ್ಟಿನಲ್ಲಿ ಸಮಾಜದ ಕೆಲಸ ಕಾರ್ಯಗಳನ್ನು ಪಕ್ಷಾತೀತವಾಗಿ ಮಾಡಲಾಗುತ್ತದೆ. ಸಮಾಜದ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆದು ದೊಡ್ಡದೊಡ್ಡ ಹುದ್ದೆಗಳನ್ನು ಅಲಂಕರಿಸಬೇಕು ಎಂದರು.




ಗಂಗಾಮತಸ್ಥ ಸಮಾಜದ ಜಿಲ್ಲಾಧ್ಯಕ್ಷರಾದ ಕೆ.ಶಾಂತಪ್ಪ ಅವರು ವಿಶೇಷ ಉಪನ್ಯಾಸ

ನೀಡಿ, ಚೌಡಯ್ಯನವರು ಯಾವುದೇ ಜಾತಿಗೆ ಸೀಮಿತವಲ್ಲ. ಅವರು ಮೂರ್ತಿ ಪೂಜೆಗೆ ಅವಕಾಶ ಕೊಡಲಿಲ್ಲ. ಅಂತಹ ನೇರ ನಿಷ್ಟುರ ಅಂಬಿಗರ ಚೌಡಯ್ಯನವರ ತಿಳಿಸಿದ ಸನ್ಮಾರ್ಗದಲ್ಲಿ ನಾವು ನಡೆಯಬೇಕು. ಚೌಡಯ್ಯನವರು ಬಸವನ ತತ್ವವನ್ನು ಒಪ್ಪಿ ಅನುಭವ ಮಂಟಪಕ್ಕೆ ಹೋದರು. ಮೂಢನಂಬಿಕೆಯಲ್ಲಿ ನಾವು ಮುಳುಗಿ ಹೋಗಿದ್ದೇವೆ. ಅಂತಹ ಮೂಢನಂಬಿಕೆಗಳಿಂದ ನಾವು ಹೊರ ಬರಬೇಕು. ನಮಗೆ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠ ಇದ್ದು, ಆ ಗುರುಗಳ ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆಯಬೇಕು. ನಮ್ಮ ಆಚಾರ ವಿಚಾರ, ಸಂಸ್ಕೃತಿಯನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯವಾಗಬೇಕು. ವಿದ್ಯಾರ್ಥಿಗಳಲ್ಲಿ ಸಂಸ್ಕಾರವನ್ನು ಕಲಿಸಬೇಕು. ಸಮಾಜದ ಬಗ್ಗೆ ತಿಳಿಹೇಳಬೇಕು ಎಂದರು.

ಸಮಾಜದ ವಿವಿಧ ಸಾಧಕರಿಗೆ ಸನ್ಮಾನ: ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮಾಜದ ಸಾಧಕರಿಗೆ ಗಣ್ಯರಿಂದ ಸನ್ಮಾನಿಸಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ, ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ, ಸಮಾಜದ ಮುಖಂಡರಾದ ಕೆ.ಶರಣಪ್ಪ, ಲಲಿತಾ ಕಡಗೋಳ, ಶರಣಪ್ಪ ಕಡಗೋಳ, ಕುರ್ಡಿ ಲಕ್ಷ??ಣ, ರಂಗ ದೇಸಾಯಿ, ರಾಜೇಶ್ವರಿ ಸೇರಿದಂತೆ ಇತರರು ಇದ್ದರು.

ಗಣ್ಯರಿಂದ ಮಾಲಾರ್ಪಣೆ: ವೇದಿಕೆಯ ಕಾರ್ಯಕ್ರಮಕ್ಕೂ ಮೊದಲು ನಗರದ ಬಿ.ಆರ್.ಬಿ. ಸರ್ಕಲ್ ಹತ್ತಿರವಿರುವ ಅಂಬಿಗರ ಚೌಡಯ್ಯನವರ ಪುತ್ಥಳಿ ನಡೆದ ಕಾರ್ಯಕ್ರಮದಲ್ಲಿ ಕಿಲ್ಲೇ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮೀಜಿ, ಸೋಮವಾರಪೇಟೆ ಹಿರೇಮಠದ ಅಭಿನವ ರಾಚೋಟಿ ವೀರಶಿವಾಚಾರ್ಯ ಸ್ವಾಮೀಜಿ ಹಾಗೂ ಸಚಿವರಾದ ಎನ್.ಎಸ್.ಬೋಸರಾಜು, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಸೇರಿದಂತೆ, ಮಾಜಿ ಸಂಸದರಾದ ಬಿ.ವಿ.ನಾಯಕ, ಮಾಜಿ ಶಾಸಕರಾದ ಎ.ಪಪ್ಪರೆಡ್ಡಿ, ರಾಯಚೂರು ನಗರಸಭೆಯ ಮಾಜಿ ಅಧ್ಯಕ್ಷರಾದ ಲಲಿತಾ ಕಡಗೋಳ, ಮುಖಂಡರಾದ ಕೆ.ಶಾಂತಪ್ಪ, ಕೆ.ಶರಣಪ್ಪ, ಕುರ್ಡಿ ಲಕ್ಷ??ಣ, ಹೊನ್ನಪ್ಪ, ಶ್ರೀನಿವಾಸ್, ಪಿ.ಪರಮೇಶ್, ಕೆ.ತಿಮ್ಮಪ್ಪ, ಪಿ.ಈರೇಶ, ಈರೇಶ ಜಾಲಗೇರಿ, ಕೆ.ನರಸಿಂಹ, ಇ.ಶಿವರಾಮ್, ಹನುಮಂತು ಕಡಗೋಳ ಸೇರಿದಂತೆ ಇತರರು ಅಂಬಿಗರ ಚೌಡಯ್ಯನವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

# ಶಿವಕುಮಾರ ಶ್ರೀಗಳ ಪುಣ್ಯಸ್ಮರಣೆಗದ್ದುಗೆ ದರ್ಶನ ಪಡೆದ ಉಪರಾಷ್ಟ್ರಪತಿ




**ತುಮಕೂರು, ಜ. 21–** ಲೋಕಕಲ್ಯಾಣಕ್ಕಾಗಿ ದಣಿವರಿಯದೆ ತಮ್ಮ ಬದುಕನ್ನೇ ಮುಡುಪಾಗಿಟ್ಟು ಸಿದ್ದಗಂಗೆಯನ್ನು ಅಕ್ಷರಶಃ ಶಿಕ್ಷಣ ಕಾಶಿಯನ್ನಾಗಿಸಿ ವಿಶ್ವ ವಿಖ್ಯಾತಗೊಳಿಸಿದ ತ್ರಿವಿಧ ದಾಸೋಹಿ, ಕಾಯಕ ಯೋಗಿ, ನಡೆದಾಡುವ ದೇವರು ಎಂದೇ ನಾಡಿನ ಉದ್ದಗಲಕ್ಕೂ ಪ್ರಸಿದ್ದರಾಗಿದ್ದ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 7ನೇ ಪುಣ್ಯ ಸ್ಮರಣೆಯನ್ನು ಸಿದ್ದಗಂಗೆಯಲ್ಲಿಂದು ವಿವಿಧ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಆಚರಿಸಲಾಯಿತು.

ಶ್ರೀಕ್ಷೇತ್ರದಲ್ಲಿ ನಡೆದ ಕಾಯಕ ಯೋಗಿಯ 7ನೇ ಪುಣ್ಯ ಸಂಸ್ಮರಣೋತ್ಸವದಲ್ಲಿ ಪಾಲ್ಗೊಳ್ಳಲು ಸಿದ್ದಗಂಗಾ ಮಠಕ್ಕೆ ಆಗಮಿಸಿದ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವ ವಿ. ಸೋಮಣ್ಣ, ಚಿಕ್ಕಬಳ್ಳಾಪುರದ ಮಧುಸೂದನ್ ಸಾಯಿ ಗ್ಲೋಬಲ್ ಹ್ಯುಮಾನಿಟೆರಿಯನ್ ಮಿಷನ್ ಶ್ರೀ ಸತ್ಯಸಾಯಿ ಲೋಕ ಸೇವಾಗುರುಕುಲಂ ಸಂಸ್ಥಾಪಕರಾದ ಶ್ರೀ ಮಧುಸೂದನ ಸಾಯಿ, ಗೃಹ ಸಚಿವ ಡಾ.ಜಿ.ಪರಮೇಶ್ವರ್, ನವದೆಹಲಿಯ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ, ಸಂಸದರಾದ ಗೋವಿಂದ ಎಂ.ಕಾರಜೋಳ, ಡಾ. ಸಿ.ಎನ್.ಮಂಜುನಾಥ್, ಶಾಸಕರಾದ ಸುರೇಶ್‌ಗೌಡ, ಜ್ಯೋತಿಗಣೇಶ್ ಅವರು ಶ್ರೀಗಳ ಗದ್ದುಗೆ ದರ್ಶನ ಪಡೆದು ಭಕ್ತಿ ಸಮರ್ಪಿಸಿದರು.

ಶ್ರೀಗಳ 7ನೇ ಪುಣ್ಯ ಸಂಸ್ಮರಣೋತ್ಸವಕ್ಕೆ ದೇಶದ ಉಪರಾಷ್ಟ್ರಪತಿಗಳ ಜತೆಗೆ ವಿವಿಧ ಮಠಾಧೀಶರುಗಳು, ಹರಗುರುಚರಮೂರ್ತಿಗಳು ಹಾಗೂ ಸಹಸ್ರಾರು ಭಕ್ತ ಸಮೂಹ ಸಾಕ್ಷಿಯಾದರು. ಲಿಂ. ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರು ಐಕ್ಯರಾಗಿರುವ ಶಿವಯೋಗಿ ಮಂದಿರದ ಗದ್ದುಗೆಯಲ್ಲಿ ನಸುಕಿನಿಂದಲೇ ವಿವಿಧ ಧಾರ್ಮಿಕ ವಿಧಿ ವಿಧಾನಗಳು, ವೇದ ಘೋಷಗಳು ಮೊಳಗಿದವು. ಶ್ರೀಗಳ 7ನೇ ಪುಣ್ಯಾರಾಧನೆ ಪ್ರಯುಕ್ತ ಶ್ರೀಗಳು ಐಕ್ಯರಾಗಿರುವ ಶಿವಯೋಗಿ ಮಂದಿರ ಬಗೆ ಬಗೆಯ ಪುಷ್ಪಗಳಿಂದ ಅಲಂಕೃತಗೊಂಡು ಕಂಗೊಳಿಸುತ್ತಿತ್ತು.

ಶ್ರೀಗಳ ಗದ್ದುಗೆಯನ್ನು ವಿವಿಧ ಪುಷ್ಪ, ಬಗೆ ಬಗೆಯ ಹಣ್ಣು ಹಂಪಲುಗಳಿಂದ ವಿಶೇಷವಾಗಿ ಸಿಂಗರಿಸಲಾಗಿದ್ದು, ವಿದ್ಯುತ್ ದೀಪಾಲಂಕಾರದೊಂದಿಗೆ ಸಿದ್ದಗಂಗಾ ಮಠ ಸಿಂಗಾರಗೊಂಡು ಕಂಗೊಳಿಸುತ್ತಿದೆ.

ಮುಂಜಾನೆಯೇ ಇಷ್ಟಲಿಂಗ ಪೂಜೆ ನೆರವೇರಿಸಿದ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿಯವರ ನೇತೃತ್ವದಲ್ಲಿ ಲಿಂ. ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ಗದ್ದುಗೆಯಲ್ಲಿ ಪೂಜಾ ವಿಧಾನಗಳಾದ ಮಹಾರುದ್ರಾಭಿಷೇಕ, ರಾಜೋಪಚಾರ, ಬಿಲ್ವಾರ್ಚನೆಯೊಂದಿಗೆ ನೆರವೇರಿದವು. ಹಲವು ಮಠಾಧೀಶರುಗಳು, ಹರಗುರುಚರಮೂರ್ತಿಗಳು ನಸುಕಿನಲ್ಲೆ ಆರಂಭವಾದ ಶ್ರೀಗಳ ಗದ್ದುಗೆ ಪೂಜಾ ಕೈಂಕರ್ಯದಲ್ಲಿ ಪಾಲ್ಗೊಂಡು ಭಕ್ತಿ ಸಮರ್ಪಿಸಿದರು.

ಶ್ರೀಗಳ ಮೂರ್ತಿ ಮೆರವಣಿಗೆ

ಶ್ರೀಮಠದ ಆವರಣದಲ್ಲಿ ಸುಮಂಗಲಿಯರು ಹೊತ್ತ 108 ಕಳಸಗಳೊಂದಿಗೆ ರುದ್ರಾಕ್ಷಿ ಮಂಟಪದಲ್ಲಿ ಲಿಂಗೈಕ್ಯ ಶ್ರೀಗಳ ಮೂರ್ತಿಯ ಮೆರವಣಿಗೆ ವೈಭವಯುತವಾಗಿ ನಡೆಯಿತು. ರುದ್ರಾಕ್ಷಿ ಮಂಟಪದಲ್ಲಿ ಶ್ರೀಗಳ ವಿಗ್ರಹ ಮೆರವಣಿಗೆಯು ಶ್ರೀಗಳ ಗದ್ದುಗೆ ಮಂದಿರದಿಂದ ಆರಂಭವಾಗಿ ಕ್ಯಾತ್ಸಂದ್ರದ ವರೆಗೆ ನಡೆಯಿತು.

ಈ ಮೆರವಣಿಗೆಯುದ್ದಕ್ಕೂ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ, ಕಿರಿಯ ಶ್ರೀಗಳಾದ ಶ್ರೀ ಶಿವಸಿದ್ದೇಶ್ವರ ಸ್ವಾಮೀಜಿ ಸೇರಿದಂತೆ ಹರಗುರುಚರಮೂರ್ತಿಗಳು, ಭಕ್ತಾದಿಗಳು, ಶಾಲಾ ಮಕ್ಕಳು ಹೆಜ್ಜೆ ಹಾಕಿದ್ದು ವಿಶೇಷವಾಗಿತ್ತು. ಶ್ರೀಗಳ ಭಾವಚಿತ್ರ ಮೆರವಣಿಗೆಯಲ್ಲಿ ಕರಡಿ ವಾದ್ಯ, ನಂದಿಧ್ವಜ ಕುಣಿತ, ಡೋಲು ಕುಣಿತ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳು ಹಾಗೂ ವಾದ್ಯ ಮೇಳಗಳ ಪ್ರದರ್ಶನ ಆಕರ್ಷಕವಾಗಿತ್ತು.

6 ಕಡೆ ದಾಸೋಹಶ್ರೀಗಳ 7ನೇ ಪುಣ್ಯ ಸಂಸ್ಮರಣೋತ್ಸವದ ಹಿನ್ನೆಲೆಯಲ್ಲಿ ಶ್ರೀಮಠದ 6 ಕಡೆಗಳಲ್ಲಿ ಲಕ್ಷಾಂತರ ಭಕ್ತಾದಿಗಳಿಗಾಗಿ ಬಗೆ ಬಗೆಯ ಖಾದ್ಯಗಳೊಂದಿಗೆ ದಾಸೋಹ ವ್ಯವಸ್ಥೆ ಮಾಡಲಾಗಿದೆ. ಶ್ರೀಮಠದ ಕೈಗಾರಿಕಾ ವಸ್ತುಪ್ರದರ್ಶನದ ಆವರಣದ 2 ಕಡೆ, ಸಾದರ ಕೊಪ್ಪಲು, ಹಳೇ ಪ್ರಸಾದ ನಿಲಯ, ಹೊಸ ಪ್ರಸಾದ ನಿಲಯ, ಅತಿಥಿಗೃಹ ಸೇರಿದಂತೆ 6 ಕಡೆ ದಾಸೋಹ ವ್ಯವಸ್ಥೆ ಮಾಡಲಾಗಿದ್ದು, ಬೆಳಗಿನ ಉಪಹಾರ ಉಪ್ಪಿಟ್ಟು, ಕೇಸರಿಬಾತ್, ಮಧ್ಯಾಹ್ನ ಚಿತ್ರಾನ್ನ, ಪಾಯಸ, ಖಾರಬೂಂದಿ, ಅನ್ನಸಾಂಬರು, ಮಾಲ್ದಿ, ಮೈಸೂರು ಪಾಕ್ ಸೇರಿದಂತೆ ವಿವಿಧ ಖಾದ್ಯಗಳನ್ನು ಭಕ್ತರು ಸವಿದು ಪುನೀತರಾದರು.

ಮುಂಜಾನೆಯಿಂದಲೇ ನಾಡಿನ ವಿವಿಧೆಡೆಯಿಂದ ಧಾವಿಸಿದ್ದ ಸಹಸ್ರಾರು ಭಕ್ತರು ಸರದಿಯ ಸಾಲಿನಲ್ಲಿ ನಿಂತು ಶ್ರೀಗಳ ಗದ್ದುಗೆ ದರ್ಶನ ಪಡೆದರು.ಶ್ರೀಮಠಕ್ಕೆ ಉಪರಾಷ್ಟ್ರಪತಿ ಭೇಟಿ ನೀಡಿದ್ದ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ., ಅಡಿಷನಲ್ ಎಸ್ಪಿಗಳಾದ ಗೋಪಾಲ್, ಪುರುಷೋತ್ತಮ್ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋ ಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

# ನರೇಗಾ ಕದನಕ್ಕೆ ಅಖಾಡ ಸಜ್ಜು

**ಬೆಂಗಳೂರು, ಜ. 21–** ರಾಜ್ಯ ವಿಧಾನಮಂಡಲದ ಅಧಿವೇಶನ ನಾಳೆಯಿಂದ ಆರಂಭವಾಗಲಿದ್ದು, ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ವಾಕ್ಸಮರ ಬಿರುಸಾಗುವ ಸಾಧ್ಯತೆಗಳಿವೆ.

ಮನರೇಗಾ ಮರು ಸ್ಥಾಪನೆ ಹಾಗೂ ವಿಬಿಜಿ ರಾಮ್‌ಜಿ ಕಾಯ್ದೆ ಸಂಬಂಧ ಚರ್ಚೆ ಈ ಅಧಿವೇಶನದಲ್ಲಿ ನಡೆಯಲಿದ್ದು, ಆಡಳಿತ ಮತ್ತು ಪ್ರತಿಪಕ್ಷಗಳ ನಡುವಿನ ಮಾತಿನ ಸಮರ, ಜಟಾಪಟಿಗಳಿಂದ ಸಮರ ಕಾವೇರುವ ಸಾಧ್ಯತೆಗಳಿದ್ದು, ಸದನ ಕದನ ಕುತೂಹಲ ಮೂಡಿಸಿದೆ.

ಈ ವರ್ಷದ ಮೊದಲ ವಿಧಾನಮಂಡಲದ ಅಧಿವೇಶನ ಇದಾಗಿರುವುದರಿಂದ ಮೊದಲ ದಿನ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ಜಂಟಿ ಅಧಿವೇಶನದಲ್ಲಿ ಭಾಷಣ ಮಾಡುವರು.

ರಾಜ್ಯಪಾಲರು ತಮ್ಮ ಭಾಷಣದಲ್ಲಿ ರಾಜ್ಯ ಸರ್ಕಾರದ ಇದುವರೆಗಿನ ಸಾಧನೆ, ಸರ್ಕಾರದ ಮುಂದಿನ ಮುನ್ನೋಟದ ಬಗ್ಗೆಯೂ ತಮ್ಮ ಭಾಷಣದಲ್ಲಿ ಪ್ರಸ್ತಾಪಿಸುವ ಸಾಧ್ಯತೆ ಇದೆ

ರಾಜ್ಯಪಾಲರ ಭಾಷಣದ ನಂತರ ಸದನವನ್ನು ಮರು ದಿನಕ್ಕೆ ಅಂದರೆ ಶುಕ್ರವಾರಕ್ಕೆ ಮುಂದೂಡಲಾಗುವುದು. ಶುಕ್ರವಾರ ಇತ್ತೀಚೆಗೆ ಅಗಲಿದ ಮಾಜಿ ಸಚಿವ ಭಿಮಣ್ಣ ಖಂಡ್ರೆ ಸೇರಿದಂತೆ ಗಣ್ಯರ ಸಂತಾಪ ಕಲಾಪ ನಡೆಯಲಿದೆ.

ಶನಿವಾರ, ಭಾನುವಾರ ಮತ್ತು ಸೋಮವಾರಗಳಂದು ಕಲಾಪ ಇರುವುದರಿಂದ ಮತ್ತೆ ಅಧಿವೇಶನ ಜ. 27 ಕ್ಕೆ ಆರಂಭವಾಗಲಿದ್ದು 31 ರವರೆಗೂ ಕಲಾಪಗಳು ನಡೆಯಲಿವೆ.

ಮನರೇಗಾ ವಿಬಿಜಿ ರಾಮ್‌ಜಿ ಚರ್ಚೆ–ಈ ಅಧಿವೇಶನದಲ್ಲಿ ಮನರೇಗಾ ಮರು ಸ್ಥಾಪನಗೆ ಆಗ್ರಹಿಸಿ ಹಾಗೂ ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆ ವಿಶೇಷ ಚರ್ಚೆಗಳು ನಡೆಯಲಿವೆ.

ಮನರೇಗಾವನ್ನು ಮರು ಸ್ಥಾಪಿಸಬೇಕು ಹಾಗೂ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ರದ್ದು ಮಾಡಬೇಕು ಎಂದು ಆಗ್ರಹಿಸಿ ಈ ಅಧಿವೇಶನದಲ್ಲಿ ನಿರ್ಣಯವನ್ನು ಸರ್ಕಾರ ಕೈಗೊಳ್ಳುವ ಸಾಧ್ಯತೆ ಇದೆ.

ಮನರೇಗಾ ಮತ್ತು ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಸಮರ ನಡೆಯಲಿದ್ದು, ಸದನದಲ್ಲಿ ಮೂರು ದಿನಗಳ ಕಾಲ ನರೇಗಾ ಜಟಾಪಟಿ ಬಿರುಸಾಗಲಿದೆ.

ವಿಬಿಜಿ ರಾಮ್‌ಜಿ ಕಾಯ್ದೆಯನ್ನು ಖಂಡಿಸಿ ಖಂಡನಾ ನಿರ್ಣಯವನ್ನು ಕೈಗೊಳ್ಳುವ ಜತೆಗೆ ಮನರೇಗಾ ಯೋಜನೆಯನ್ನು ಮರು ಸ್ಥಾಪಿಸುವಂತೆಯೂ ಈ ಅಧಿವೇಶನದಲ್ಲಿ ನಿರ್ಣಯಗಳನ್ನು ಸರ್ಕಾರ ಕೈಗೊಳ್ಳಲಿದೆ.

ವಿಬಿಜಿ ರಾಮ್‌ಜಿ ಕಾಯ್ದೆಗೆ ವಿರೋಧ ವ್ಯಕ್ತಪಡಿಸಿರುವ ಕಾಂಗ್ರೆಸ್ ಸದಸ್ಯರುಗಳು ಈ ಅಧಿವೇಶನದಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆ ಜಾರಿಯಿಂದ ಆಗಲಿರುವ ಬಾಧಕಗಳ ಬಗ್ಗೆ ವಿಶೇಷವಾಗಿ ಪ್ರಸ್ತಾಪಿಸಿ ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಲು ಸಜ್ಜಾಗಿವೆ.

ಇದಕ್ಕೆ ಪ್ರತಿಯಾಗಿ ಬಿಜೆಪಿ ಸಹ ವಿಬಿಜಿ ರಾಮ್‌ಜಿ ಕಾಯ್ದೆಯಿಂದ ಆಗುವ ಲಾಭಗಳು ಹಾಗೂ ಈ ಕಾಯ್ದೆ ಯಾವ ರೀತಿ ಜನಪರವಾಗಿದೆ ಎಂಬುದನ್ನು ಸದನದ ಮುಂದಿಟ್ಟು ಆಡಳಿತ ಪಕ್ಷಕ್ಕೆ ತಿರುಗೇಟು ನೀಡಲು ಸರ್ವ ಸನ್ನದ್ಧವಾಗಿದೆ. ಹಾಗಾಗಿ ಸದನ ಕದನ ಬಿರುಸಾಗಿ ಸದನದ ಕಲಾಪಗಳು ಕಾವೇರುವುದು ನಿಶ್ಚಿತ.

ನಾಳೆಯಿಂದ ಆರಂಭವಾಗುವ ವಿಧಾನಮಂಡಲದ ಅಧಿವೇಶನ ಈ ತಿಂಗಳ 31 ರವರೆಗೂ ನಡೆಯಲಿದೆ.

ರಾಜ್ಯಪಾಲರ ಭಾಷಣ ಕುತೂಹಲಕ್ಕೆಡೆ–ವಿಬಿಜಿ ರಾಮ್‌ಜಿ ಕಾಯ್ದೆಯನ್ನು ವಿರೋಧಿಸಿ ಹಾಗೂ ಮನರೇಗಾವನ್ನು ಮರು ಸ್ಥಾಪಿಸುವಂತೆ ಆಗ್ರಹಿಸಿ ಚರ್ಚೆ ನಡೆಸಲು ರಾಜ್ಯ ಸರ್ಕಾರ ಅಧಿವೇಶನ ಕರೆಯುವ ತೀರ್ಮಾನ ಮಾಡಿದೆ. ನಾಳಿನ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರು ಮಾಡುವ ಭಾಷಣದಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ವಿರೋಧಿಸಿವ ಅಂಶಗಳು ಸೇರ್ಪಡೆಯಾದರೆ ಅದನ್ನು ರಾಜ್ಯಪಾಲರು ಓದುವುರೇ ಇಲ್ಲ ಓದಲು ನಿರಾಕರಿಸುವರೇ ಎಂಬುದು ಈಗ ಕುತೂಹಲಕ್ಕೆ ಕಾರಣವಾಗಿದೆ.

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ರಾಜ್ಯದ ರಾಜ್ಯಪಾಲರಾದ ಮೇಲೆ ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ಸರ್ಕಾರ ಸಿದ್ಧಪಡಿಸಿಕೊಟ್ಟ ಭಾಷಣವನ್ನು ಯಥಾವತ್ತಾಗಿ ಓದಿದ್ದಾರೆ. ಇದುವರೆಗೂ ಯಾವುದೇ ಸಂಘರ್ಷಕ್ಕೆ ರಾಜ್ಯಪಾಲರ ಭಾಷಣದ ಅಂಶಗಳು ಎಡೆ ಮಾಡಿಕೊಟ್ಟಿಲ್ಲ. ಆದರೆ ನಾಳಿನ ಭಾಣದಲ್ಲಿ ರಾಜ್ಯ ಸರ್ಕಾರ ವಿಬಿಜಿ ರಾಮ್ ಜಿ ಕಾಯ್ದೆಯನ್ನು ವಿರೋಧಿಸುವ ಅಂಶಗಳನ್ನು ಸೇರ್ಪಡೆ ಮಾಡಿದರೆ ಅದನ್ನು ರಾಜ್ಯಪಾಲರು ಓದುತ್ತಾರೋ ಇಲ್ಲವೋ ಎಂಬುದು ಈಗ ಚರ್ಚೆಗೇ ಎಡೆ ಮಾಡಿಕೊಟ್ಟಿದೆ.

ರಾಜ್ಯಪಾಲರು ಸರ್ಕಾರ ಸಿದ್ಧಪಡಿಸಿದ ಭಾಷಣವನ್ನು ಯಥಾವತ್ತಾಗಿ ಓದಬೇಕು ಎಂಬ ನಿಯಮವೇನೂ ಇಲ್ಲ. ಭಾಷಣದ ಯಾವ ಅಂಶವನ್ನು ಓದಬೇಕು ಯಾವ ಅಂಶವನ್ನು ಓದಬಾರದು ಎಂಬುದು ರಾಜ್ಯಪಾಲರ ವಿವೇಚನೆಗೆ ಬಿಟ್ಟ ವಿಚಾರ. ಭಾಷಣವನ್ನು ಯಥಾವತ್ತಾಗಿ ಓದಬೇಕು ಎಂದು ರಾಜ್ಯ ಸರ್ಕಾರ ಒತ್ತಡ ಹೇರುವಂತೆಯೂ ಇಲ್ಲ. ಹಾಗಾಗಿ ಒಂದು ವೇಳೆ ರಾಜ್ಯ ಸರ್ಕಾರ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ವಿರೋಧಿಸಿ ಮನರೇಗಾವನ್ನು ಮರು ಸ್ಥಾಪಿಸುವಂತೆ ಆಗ್ರಹಿಸುವ ವಿಚಾರವನ್ನು ರಾಜ್ಯಪಾಲರ ಭಾಷಣದಲ್ಲಿ ಸೇರ್ಪಡೆ ಮಾಡಿದರೆ ಅದನ್ನು ರಾಜ್ಯಪಾಲರು ವಾಚಿಸುವರೆ ಇಲ್ಲವೇ ಎಂಬುದು ಕುತೂಹಲ ಮೂಡಿಸಿದ್ದು, ನಾಳಿನ ವಿಧಾನಮಂಡಲದ ಅಧಿವೇಶನದಲ್ಲೇ ಇದೆಲ್ಲದಕ್ಕೂ ಉತ್ತರ ಸಿಗಲಿದೆ.



ನಾಳೆ ಬಿಜೆಪಿ ಶಾಸಕಾಂಗ ಪಕ್ಷದ ಸಭೆ–ನಾಳೆಯಿಂದ ಆರಂಭವಾಗಲಿರುವ ರಾಜ್ಯ ವಿಧಾನಮಂಡಲದ ಅಧಿವೇಶನದಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆ ಬಗ್ಗೆ ವಿಶೇಷ ಚರ್ಚೆಗಳು ನಡೆಯುವ ಹಿನ್ನೆಲೆಯಲ್ಲಿ ನಾಳೆ ಸಂಜೆ ಬಿಜೆಪಿಯ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ.

ಈ ಸಭೆಯಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆಯ ಜನ ಕಲ್ಯಾಣ ಅಂಶಗಳನ್ನು ಕೇಂದ್ರದ ಕೃಷಿ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ಅವರು ಬಿಜೆಪಿ ಶಾಸಕರಿಗೆ ಮನವರಿಕೆ ಮಾಡಿಕೊಟ್ಟು ಸದನದಲ್ಲಿ ಯಾವ ರೀತಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ಸಮರ್ಥಿಸಿಕೊಳ್ಳಬೇಕು ಎಂಬ ಬಗ್ಗೆ ಬಿಜೆಪಿ ಶಾಸಕರಿಗೆ ಪಾಠ ಮಾಡಲಿದ್ದಾರೆ.

ಇದರ ಜತೆಗೆ ಈ ಹಿಂದೆ ಜಾರಿಯಲ್ಲಿದ್ದ ಮನರೇಗಾ ಕಾಯ್ದೆಯನ್ನು ದುರುಪಯೋಗಪಡಿಸಿಕೊಂಡಿರುವುದು ಹಾಗೂ ಭ್ರಷ್ಟಾಚಾರ ನಡೆದಿರುವುದನ್ನು ಸದನದ ಮುಂದಿಟ್ಟು ಆಡಳಿತರೂಢ ಕಾಂಗ್ರೆಸ್ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸಲು ಯಾವ ರೀತಿ ಕಾರ್ಯ ತಂತ್ರಗಳನ್ನು ರೂಪಿಸಬೇಕು ಎಂಬ ಬಗ್ಗೆ ನಾಳೆಯಿಂದ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಚರ್ಚೆಗಳು ನಡೆಯಲಿವೆ.

# ನಿಯಮಿತ ತಪಾಸಣೆ ಮತ್ತು ಆರಂಭಿಕ ಚಿಕಿತ್ಸೆಯಿಂದ ಸ್ತನ ಕ್ಯಾನ್ಸರ್ ತಡೆಗಟ್ಟಲು ಸಾಧ್ಯ

**ಬಳ್ಳಾರಿ,ಜ.21–** ನಿಯಮಿತ ತಪಾಸಣೆ ಮತ್ತು ಆರಂಭಿಕ ಚಿಕಿತ್ಸೆಯಿಂದ ಸ್ತನ ಕ್ಯಾನ್ಸರ್ ಅನ್ನು ತಡೆಗಟ್ಟಬಹುದಾಗಿದೆ ಎಂದು ರಾಜ್ಯಸಭಾ ಸದಸ್ಯ ಡಾ.ಸೈಯದ್ ನಾಸೀರ್ ಹುಸೇನ್ ಅವರು ಹೇಳಿದರು.

ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಮಂಗಳವಾರ ಏರ್ಪಡಿಸಿದ್ದ ಸ್ವಸ್ಥ ಸೇತು ಆರೋಗ್ಯ ಸೇತುವೆ ಯೋಜನೆಯಡಿ ಸ್ತನ ಕ್ಯಾನ್ಸರ್ ಜಾಗೃತಿ ಮತ್ತು ತಪಾಸಣೆಯ 2025–26 ನೇ ಸಾಲಿನ ವಾರ್ಷಿಕ ಮೌಲ್ಯಮಾಪನ ವರದಿಯ ಯೋಜನೆಯ ಹಸ್ತಾಂತರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಗ್ರಾಮೀಣ ಮತ್ತು ನಗರ ಸಮುದಾಯಗಳಲ್ಲಿನ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ನ್ನು ತಡವಾಗಿ ಪತ್ತೆಹಚ್ಚುವಿಕೆ ಹಾಗೂ ಇದರಿಂದಾಗುವ ಹಾನಿಯನ್ನು ತಡೆಗಟ್ಟಲು ಸಾರ್ವಜನಿಕ ಆರೋಗ್ಯ ವ್ಯವಸ್ಥೆಯ ಮೂಲಕ ಜಾಗೃತಿ ಹಾಗೂ ಆರಂಭಿಕ ತಪಾಸಣೆಗಾಗಿ ಹುಮನ ಪೀಪಲ್ ಟು ಪೀಪಲ್ ಇಂಡಿಯಾ ಸಂಸ್ಥೆ ಮತ್ತು ಇಂಡಸ್ ಸೇತು ಸಂಸ್ಥೆ ವತಿಯಿಂದ ಬಳ್ಳಾರಿ ಜಿಲ್ಲೆಯಲ್ಲಿ 2025ರ ಫೆಬ್ರವರಿ ಯಿಂದ ಡಿಸೆಂಬರ್ ಅವಧಿಯಲ್ಲಿ ಸ್ವಸ್ಥ ಸೇತು ಸ್ತನ ಕ್ಯಾನ್ಸರ್ ಜಾಗೃತಿ ಮತ್ತು ತಪಾಸಣೆ ಯೋಜನೆಯನ್ನು ಜಾರಿಗೆ ತರಲಾಯಿತು ಎಂದು ಅವರು ತಿಳಿಸಿದರು.

ಈ ಯೋಜನೆಯಡಿ ಜಿಲ್ಲೆಯಲ್ಲಿ ಸುಮಾರು 537 ಆಶಾ ಕಾರ್ಯಕರ್ತೆಯರಿಗೆ ಸಮುದಾಯಗಳಲ್ಲಿ ತಪಾಸಣೆ ಕೈಗೊಳ್ಳುವ ಕುರಿತು ತರಬೇತಿ ನೀಡಲಾಗಿತ್ತು. ಅವರು ಗ್ರಾಮೀಣ ಪ್ರದೇಶಗಳಿಗೆ ತೆರಳಿ ಸುಮಾರು 1,50,000 ಮಹಿಳೆಯರನ್ನು ತಪಾಸಣೆಗೆ ಒಳಪಡಿಸಿದ್ದರು. ಅದರಲ್ಲಿ 1,20,204 ಮಹಿಳೆಯರು ಸ್ವಯಂ ಪರೀಕ್ಷೆ ಕೈಗೊಂಡಿದ್ದರು. 42 ಮಹಿಳೆಯರು ಅನುಮಾನಾಸ್ಪದ ಲಕ್ಷಣಗಳೊಂದಿಗೆ ಗುರುತಿಸಲಾಗಿದೆ. ಇವರಲ್ಲಿ 35 ಮಹಿಳೆಯರಿಗೆ ಸ್ತನ ಕ್ಯಾನ್ಸರ್ ಇರುವುದು ದೃಢಪಟ್ಟಿದೆ. ಅದರಲ್ಲಿ 15 ಜನ ಮಹಿಳೆಯರಿಗೆ ಈಗಾಗಲೇ ಚಿಕಿತ್ಸೆ ನೀಡಲಾಗುತ್ತಿದೆ. ಉಳಿದ 20 ಜನ ಮಹಿಳೆಯರಿಗೂ ಚಿಕಿತ್ಸೆ ನೀಡಲಾಗುವುದು ಎಂದರು.

ದೃಢಪಟ್ಟ ಮಹಿಳೆಯರಿಗೆ ಆರಂಭಿಕವಾಗಿ ಜಿಲ್ಲಾ ಆಸ್ಪತ್ರೆ, ಬಿಎಂಸಿಆರ್ ಸಿ ಆಸ್ಪತ್ರೆಗಳಲ್ಲಿ ಆರಂಭಿಕ ಚಿಕಿತ್ಸೆ ನೀಡಲಾಗುತ್ತಿದೆ. ನಂತರ ಬೆಂಗಳೂರಿನ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಗೆ ಕಳುಹಿಸಿಕೊಡಲಾಗುವುದು ಮತ್ತು ಜಿಲ್ಲೆಗೆ ಹತ್ತಿರವಾಗುವ ಅಂತರ್ ರಾಜ್ಯದ ಹೈದ್ರಬಾದ್ ನಲ್ಲಿರುವ ಆಸ್ಪತ್ರೆಗೂ



ಸಹ ಚಿಕಿತ್ಸೆಗೆ ಅನುಗುಣವಾಗಿ ಕಳುಹಿಕೊಡಲು ತೆಲಂಗಾಣದ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಲಾಗುವುದು ಎಂದರು.

ಹಾಗಾಗಿ ಆಶಾಕಾರ್ಯಕರ್ತೆಯರು ಹೆಚ್ಚು–ಹೆಚ್ಚು ತಪಾಸಣೆ ಕಾರ್ಯ ಕೈಗೊಳ್ಳಬೇಕು. ರೋಗಿಗಳ ಚಿಕಿತ್ಸಾ ಖರ್ಚು–ವೆಚ್ಚುಗಳಿಗೆ ಸಂಬಂಧಿಸಿದಂತೆ ಅಗತ್ಯ ಸಹಕಾರ ನೀಡಲಾಗುವುದು. ಬಳ್ಳಾರಿ ಜಿಲ್ಲೆ ಮಾದರಿಯಲ್ಲಿ ಸ್ತನ ಕ್ಯಾನ್ಸರ್ ಜಾಗೃತಿ ಮತ್ತು ತಪಾಸಣೆ ಕಾರ್ಯವನ್ನು ಎಲ್ಲಾ ಜಿಲ್ಲೆಗಳಿಗೆ ಮತ್ತು ತಾಲ್ಲೂಕುಗಳಿಗೆ ವಿಸ್ತರಣೆಯ ಕುರಿತು ಮುಂಬರುವ ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡುರಾವ್ ಅವರೊಂದಿಗೆ ಚರ್ಚಿಸಲಾಗುವುದು ಎಂದರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಮಾತನಾಡಿ, ಹೆಣ್ಣಿನಿಂದಲೇ ಒಂದು ಕುಟುಂಬ ನಿರ್ವಹಣೆ ಸಾಧ್ಯ. ಹೆಣ್ಣಿನ ಆರೋಗ್ಯ ನಮ್ಮ ಸರ್ಕಾರದ ಆದ್ಯತೆಯಾಗಿದೆ. ಕ್ಯಾನ್ಸರ್ ತಡೆ ಹಾಗೂ ಆರಂಭದ ಹಂತದಲ್ಲೇ ಕಾಯಿಲೆ ಪತ್ತೆ ಹಚ್ಚುವಿಕೆ ಕುರಿತಂತೆ ಅರಿವು ಹೆಚ್ಚಿಸುವುದು ಮುಖ್ಯವಾಗಿದ್ದು, ಆರಂಭದಲ್ಲೇ ಕಾಯಿಲೆ ಪತ್ತೆ ಹಚ್ಚುವ ವಿಧಾನಗಳ ಬಗ್ಗೆ ಅರಿವು ಮೂಡಿಸುವುದು ತುರ್ತು ಅಗತ್ಯವಾಗಿದೆ ಎಂದರು.

ವಾರ್ಷಿಕವಾರು ಸ್ತನ ಕ್ಯಾನ್ಸರ್ ಜಾಗೃತಿ ಮತ್ತು ತಪಾಸಣೆ ಕಾರ್ಯವು ನಮ್ಮ ಜಿಲ್ಲೆಯಲ್ಲಿ ನಡೆಯುತ್ತಿರುವುದು ಸುದೈವದ ಸಂಗತಿಯಾಗಿದ್ದು, ಈ ಯೋಜನೆಗೆ ಮಾತೃ ದೇವ್ರೋ ಭವ ಎಂದು ನಾಮಕರಣ ಮಾಡಬೇಕು ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಸ್ತನ ಕ್ಯಾನ್ಸರ್ ಜಾಗೃತಿ ಮತ್ತು ತಪಾಸಣೆ ಕಾರ್ಯವು ಜಿಲ್ಲೆಯ ಎರಡು ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಿದ್ದು, ಅದರಲ್ಲಿ 16 ಪ್ರಾಥಮಿಕ ಆರೋಗ್ಯ ಕೇಂದ್ರ, 3 ಸಮುದಾಯ ಆರೋಗ್ಯ ಮತ್ತು 5 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿದೆ. ಮುಂಬರುವ ದಿನಗಳಲ್ಲಿ ತಪಾಸಣಾ ಕಾರ್ಯವನ್ನು ಎಲ್ಲಾ ತಾಲ್ಲೂಕು ಮತ್ತು ಗ್ರಾಮಗಳಿಗೂ ವಿಸ್ತರಿಸಲಾಗುವುದು. ಮುಖ್ಯವಾಗಿ ತಪಾಸಣಾ ಕಾರ್ಯ ನಿರಂತರವಾಗಿರಬೇಕು. ಇದಕ್ಕೆ ಆಶಾಕಾರ್ಯಕರ್ತೆಯರು ಕೈಜೋಡಿಸಬೇಕು ಎಂದರು.

ಸ್ತನ ಕ್ಯಾನ್ಸರ್ ಜಾಗೃತಿ ಮತ್ತು ತಪಾಸಣೆ ಕಾರ್ಯದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ವೈದ್ಯರು ಮತ್ತು ಆಶಾಕಾರ್ಯಕರ್ತೆಯರಿಗೆ ಕಾರ್ಯಕ್ರಮದಲ್ಲಿ ಅಭಿನಂದನಾ ಪ್ರಮಾಣ ಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ, ಬಿಎಂಸಿಆಸಿ ನಿರ್ದೇಶಕ ಡಾ.ಗಂಗಾಧರ ಗೌಡ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ.ಕೆ.ಜಿ.ವೀರೇಂದ್ರ ಕುಮಾರ್, ನವದೆಹಲಿಯ ಎಪಿಪಿಐ ಆರೋಗ್ಯ ಕಾರ್ಯಕ್ರಮಗಳ ಸಂಯೋಜಕ ಸುಬ್ರತ್ ಮೊಹಂತಿ, ನ್ಯಾಷನಲ್ ಪ್ರೋಗ್ರಾಂ ಮ್ಯಾನೇಜರ್ ನತ್ತು ಸಿಂಗ್, ಏರೋಇನ್ಫಾಸ್ಟ್ರಾಟ್ಜಿಕ್ಸ್ ಸಂಸ್ಥಾಪಕರು ಹಾಗೂ ವ್ಯವಸ್ಥಾಪಕ ಪಾಲುದಾರರಾದ ಮೆಹನಾಜ್ ಅನ್ಸಾರಿ ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು, ಆಶಾಕಾರ್ಯಕರ್ತೆಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಕೋಳೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಮನವಿ




**ಬಳ್ಳಾರಿ, ಜ.21**: ಜಿಲ್ಲೆಯ ಕುರುಗೋಡು ತಾಲ್ಲೂಕಿನ ಕೋಳೂರು ಗ್ರಾಮದ ಬಳಿ ಪ್ರಾಥಮಿಕ ಆರೋಗ್ಯ ಕೇಂದ್ರ ಇದ್ದು, ಈ ಆರೋಗ್ಯ ಕೇಂದ್ರದಿಂದ ಕೋಳೂರು ಗ್ರಾಮ ಸೇರಿದಂತೆ ಇತರ ಸುತಮುತ್ತಲಿನ ಹಲವಾರು ಗ್ರಾಮಗಳ ಸುಮಾರು 50,000 ಕ್ಕಿಂತ ಹೆಚ್ಚಿನ ಜನರು ಸೌಲಭ್ಯ ಪಡೆದುಕೊಳ್ಳುತ್ತಿದ್ದಾರೆ. ಆದರೆ ಈ ಆಸ್ಪತ್ರೆಗೆ ಮೂಲಭೂತ ಸೌಕರ್ಯವಿಲ್ಲದೆ ಹಲವಾರು ಸಮಸ್ಯೆಗಳಿಂದ ಕೂಡಿದೆ. ಈ ಕೇಂದ್ರದಿಂದ ಪ್ರತಿದಿನ 100 ರಿಂದ 150 ವರ ರೋಗಿಗಳು ಬಂದು ತಮ್ಮ ಕಾಯಿಲೆಗೆ ಔಷಧ ಪಡೆದುಕೊಂಡು ಹೋಗುತ್ತಾರೆ. ಆದ್ದರಿಂದ ಇಷ್ಟೆಲ್ಲಾ ಜನರು ಚಿಕಿತ್ಸೆ ಪಡೆಯುವ ಆಸ್ಪತ್ರೆಗೆ ಇಂದು ಹಲವಾರು ಸೌಲಭ್ಯಗಳ ಅವಶ್ಯಕತೆ ಇದೆ. ಒಬ್ಬ ಪ್ರಸೂತಿ ತಜ್ಞರ ಅವಶ್ಯಕತೆ ಇದೆ, ಏಕೆಂದರೆ ಪ್ರಸೂತಿ ವೈದ್ಯರು ಇಲ್ಲದೆ ಇರುವುದರಿಂದ ಸ್ತ್ರೀರೋಗಿಗಳು ಮತ್ತು ಬಾಣಂತಿಯರು ದೂರದ ಬಳ್ಳಾರಿಗೆ ಹಾಗೂ ಕುರುಗೋಡಿಗೆ ಹೋಗಿ ಬರಬೇಕಾಗುತ್ತದೆ ಇದು ಬಡವರಿಂದ ಕೂಲಿಕಾರ್ಮಿಕರಿಂದ ಸಾಧ್ಯವಿಲ್ಲ ಮತ್ತು ರಾಷ್ಟ್ರೀಯ ಮುಖ್ಯರಸ್ತೆಯ ಇರುವುದರಿಂದ ಅಪಘಾತಗಳು ಸಂಭವಿಸಿ ಸಾವು ನೋವುಗಳು ಉಂಟಾಗುವ ಸಂಭವವಿದೆ. ಆದ್ದರಿಂದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದಜ್ಜಗೆರಿಸಿ ಸಾರ್ವಜನಿಕರ ಆರೋಗ್ಯ ಕಾಪಾಡುವುದರ ಜೊತೆಗೆ ಜೀವವನ್ನು ಉಳಿಸಬೇಕಾಗಿದೆ ಎಸ್ ಯು ಸಿ ಐ ಕಮ್ಯುನಿಸ್ಟ್ ಪಕ್ಷದ ವತಿಯಿಂದ ಸಾರ್ವಜನಿಕರ ಪರವಾಗಿ ಜಿಲ್ಲಾ ಆರೋಗ್ಯಾಧಿಕಾರಿಗೆ ಮನವಿ ಮಾಡಿಕೊಂಡಿದ್ದಾರೆ.

## ರೈತರ ಅನುಕೂಲಕ್ಕಾಗಿ ತೊಗರಿ ಸಂಸ್ಕರಣ ಯಂತ್ರ ಆವಿಷ್ಕಾರ: ಸಚಿವ ಪ್ರಿಯಾಂಕ್ ಖರ್ಗೆ

**ಕಲಬುರಗಿ,ಜ.21**–ತೊಗರಿ ಕಣಜ ಎಂದೇ ಹೆಸರಾಗಿರುವ ಕಲಬುರಗಿ ಜಿಲ್ಲೆಯಲ್ಲಿ ಬೆಳೆಯುವ ತೊಗರಿಯು ವಿಶಿಷ್ಠ ರುಚಿ, ವಿಭಿನ್ನ ಪರಿಮಳ ಮತ್ತು ದೀರ್ಘಕಾಲ ಬಾಳಿಕೆ ಬರುವ ಉತ್ತಮ ಗುಣಮಟ್ಟದ ಕಾರಣದಿಂದಾಗಿ ಉಖ ಟ್ಯಾಗ್ ಪಡೆದು ಜಾಗತಿಕವಾಗಿ ತನ್ನದೇ ಆದ ಸ್ಥಾನವನ್ನು ಮತ್ತು ಹೆಗ್ಗುರುತನ್ನು ಪಡೆದಿದೆ.

ಇಂತಹ ಅಪರೂಪದ ತೊಗರಿಯನ್ನು ಬೆಳೆಯುವ ರೈತರಿಗೆ ವೈಜ್ಞಾನಿಕವಾಗಿ ಮತ್ತು ಗುಣಮಟ್ಟದ ಸಂಸ್ಕರಣೆ ಮಾಡುವ ಸೌಲಭ್ಯಗಳಿಲ್ಲದೆ, ಪೂರಕವಲ್ಲದ ಯಂತ್ರಗಳನ್ನು ಬಳಸುತ್ತಿದ್ದರು, ಇದರಿಂದಾಗಿ ತಮ್ಮ ಬೆಳೆಗೆ ಉತ್ತಮ ಬೆಲೆ ಪಡೆಯುವಲ್ಲಿ ಹಿನ್ನಡೆ ಅನುಭವಿಸುತ್ತಿದ್ದರು, ಇದನ್ನು ಗಮನಿಸಿ ಪರಿಣಾಮಕಾರಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕಲಬುರಗಿ ಜಿಲ್ಲಾಡಳಿತವು ರಾಯಚೂರು ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳು ಮತ್ತು ಸಂಶೋಧಕರೊಂದಿಗೆ ಚರ್ಚೆ ನಡೆಸಿ ಗುಣಮಟ್ಟದ ಸಂಸ್ಕರಣೆಗಾಗಿ ವೈಜ್ಞಾನಿಕ ರೀತಿಯ ಯಂತ್ರವನ್ನು ವಿನ್ಯಾಸಗೊಳಿಸಲಾಯಿತು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಕೆಕೆಆ???ಡಿಬಿಯ 5.50 ಕೋಟಿ ಮ್ಯಾಕ್ರೋ ಅನುದಾನದಲ್ಲಿ ಮೊದಲ ಹಂತವಾಗಿ 11 ಯಂತ್ರಗಳನ್ನು ತಯಾರಿಸಿ ಲೋಕಾರ್ಪಣೆಗೊಳಿಸಲಾಗಿದೆ,




ಪ್ರತಿ ಗಂಟೆಗೆ 2 ಟನ್ ತೊಗರಿಯನ್ನು ಸಂಸ್ಕರಿಸುವ ಸಾಮರ್ಥ್ಯ ಹೊಂದಿರುವ ಈ ಯಂತ್ರದ ಬಳಕೆಯಿಂದ ರೈತರಿಗೆ ಪ್ರತಿ ಕ್ವಿಂಟಾಲ್ ತೊಗರಿಗೆ 500 ರಿಂದ 1000 ರೂಪಾಯಿಗಳಷ್ಟು ಹೆಚ್ಚಿನ ಧಾರಣೆ ದೊರಕುವ ನಿರೀಕ್ಷೆ ಇದೆ.

ಕಲಬುರಗಿ ಜಿಲ್ಲೆಯ ಕೃಷಿ ಕ್ಷೇತ್ರದ ಉನ್ನತಿಗಾಗಿ ನಮ್ಮ ಸರ್ಕಾರವು ಸಕಲ ನೆರವನ್ನು ಒದಗಿಸಲು ಬದ್ಧವಾಗಿದೆ ಎಂದು ಸಚಿವರು ಬಿಡುಗಡೆಗೊಳಿರುವ ಪತ್ರಿಕಾಹೇಳಿಯಲ್ಲಿ ತಿಳಿಸಿದ್ದಾರೆ.

## ಬಳ್ಳಾರಿ ಬ್ಯಾನರ್ ಗಲಾಟೆ ಫೈರಿಂಗ್ಗಂಭೀರವಾಗಿ ಪರಿಗಣಿಸದ ಸರ್ಕಾರ: ಶ್ರೀರಾಮುಲು

**ಬಳ್ಳಾರಿ, ಜ.21:** ಬ್ಯಾನರ್ ವಿಷಯದಲ್ಲಿ ನಗರದಲ್ಲಿ ಜ.1 ರಂದು ನಡೆದ ಫೈರಿಂಗ್ ಗಲಾಟೆಯ ಬಗ್ಗೆ ಎಲ್ಲಾ ರೀತಿಯ ಸಾಕ್ಷಿಗಳನ್ನು ನಾನು ಪೊಲೀಸರಿಗೆ ನೀಡಿದೆ. ಆದರೂ ಈ ವಿಷಯದಲ್ಲಿ ಸರ್ಕಾರ ಗಂಭೀರವಾಗಿ ಪರಿಗಣಿಸಿದಂತೆ ಕಾಣುತ್ತಿಲ್ಲ ಎಂದು ಬಿಜೆಪಿ ಮುಖಂಡ, ಮಾಜಿ ಸಚಿವ ಶ್ರೀರಾಮುಲು ಹೇಳಿದ್ದಾರೆ.

ಅವರು ಇಂದು ನಗರದ ತಮ್ಮ ನಿವಾಸದಲ್ಲಿ ಮಾಧ್ಯಮಗೋಷ್ಟಿ ನಡೆಸಿ. ಪ್ರಕರಣವನ್ನು ಸಿಐಡಿಗೆ ವಹಿಸಿದೆಂದು ಕೈ ಕಟ್ಟಿ ಕುಳಿತಿದೆ. ಈ ಘಟನೆಯಲ್ಲಿ ನಮಗೆ ನ್ಯಾಯ ದೊರಕುವವರೆಗೆ ನಮ್ಮ ಹೋರಾಟ ನಡೆಯಲಿದೆ.

ಮತ್ತೊಮ್ಮೆ ಗೃಹ ಸಚಿವರನ್ನು ಭೇಟಿ ಮಾಡಿ ಈ ವಿಷಯ ಚರ್ಚಿಸಲಿದೆಂದರು.

ನಗರದಲ್ಲಿ ಮಟ್ಕಾ, ಜೂಜಾಟ, ಡಗ್ಸ್ ಮಾಫಿಯಾ ಶಾಸಕರ ಬೆಂಬಲದಿಂದ ನಡೆಯುತ್ತದೆ ಎಂದು ಆರೋಪಿಸಿದ ಅವರು. ನಗರದಲ್ಲಿ ಕಾನೂನು ವ್ಯವಸ್ಥೆ ಹದಗೆಟ್ಟಿದೆಂದರು.

ತೆಲಂಗಾಣ ಚುನಾವಣೆ ಸಂದರ್ಭದಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ನಡೆಯಿತು. ಈಗ ಪಂಚ ರಾಜ್ಯ ಚುನಾವಣೆ ಹಿನ್ನಲೆಯಲ್ಲಿ ಅಬಕಾರಿ ಪ್ರಕರಣ ನಡೆಯುತ್ತಿದೆ. ಇದರಲ್ಲಿ ನೇರವಾಗಿ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಅವರ ಪುತ್ರ ಭಾಗಿಯಾಗಿದ್ದಾರೆ. ಅದಕ್ಕಾಗಿ ಸಚಿವರನ್ನು ಸಂಪುಟದಿಂದ ಕೈ ಬಿಡಬೇಕು ಎಂದು ಆಗ್ರಹಿಸಿದರು.

ಸಿಎಂ ಸೀಟು ಗೊಂದಲ;

ರಾಜ್ಯದಲ್ಲಿ ಇನ್ನೂ ಸಿಎಂ ಸೀಟಿನ ಗೊಂದಲ ಬಗೆಹರಿಯದ ಕಾರಣ ಎಲ್ಲಾ ಇಲಾಖೆಗಳಲ್ಲಿ ಭ್ರಷ್ಟಾಚಾರ ಹೆಚ್ಚಿದೆ. ಇತರ ರಾಜ್ಯಗಳ ಚುನಾವಣಾ ವೆಚ್ಚಕ್ಕೆ ಕಾಂಗ್ರೆಸ್ ಗೆ ಎಟಿಎಂ ಆಗಿ ಕೆಲಸ ಮಾಡುತ್ತಿದೆಂದು ಆರೋಪಿಸಿದರು.



ಕ್ಷಮೆ ಯಾಚನೆ;ಗಾಂಜಾ, ಡ್ರಗ್ಸ್ ನಿಂದ ಓರ್ವ ಬಾಲಕಿ ನಗರದಲ್ಲಿ ದೌರ್ಜನ್ಯಕ್ಕೆ ಒಳಗಾಗಿದ್ದರ ಬಗ್ಗೆ ಬಹಿರಂಗವಾಗಿ ಮಾತನಾಡಿದ್ದು ಆ ಬಾಲಕಿಯ ಕುಟುಂಬಕ್ಕೆ ನೋವಾಗಿದ್ದರೆ ಕ್ಷಮೆಯಾಚಿಸುವೆ. ಇದನ್ನು ಪ್ರಸ್ತಾಪ ಮಾಡಬಾರದಿತ್ತು. ಬಾಯಿ ತಪ್ಪಿ ಮಾತಾಡಿದ್ದು. ಅದಕ್ಕಾಗಿ ಆ ಬಾಲಕಿಯ ಕುಟುಂಬದ ಜೊತೆ ಸದಾ ನಾನು ಇರುತ್ತೇನೆ. ಈ ವಿಷಯದಲ್ಲಿ ಕಾನೂನನ್ನು ಎದಿರಿಸುವೆ ಎಂದರು.

ಸುದ್ದಿಗೋಷ್ಟಿಯಲ್ಲಿ ಮಾಜಿ ಸಂಸದ ಸಣ್ಣ ಪಕ್ಕೀರಪ್ಪ, ಬುಡಾ ಮಾಜಿ ಅಧ್ಯಕ್ಷ ಪಿ.ಪಾಲಣ್ಣ, ಬಿಜೆಪಿ ಪಕ್ಷದ ಮುಖಂಡರಾದ ತಿಮ್ಮಪ್ಪ, ಓಬಳೇಶ್, ಹಲಕುಂದಿ ಮಲ್ಲಿಕಾರ್ಜುನಗೌಡ, ಕೆ.ಹನುಮಂತಪ್ಪ ಮೊದಲಾದವರು ಇದ್ದರು.

## ಬಸ್ ನಿಲ್ದಾಣದಲ್ಲಿ ವೃದ್ಧೆಯ ಕಿವಿಯೋಲೆ ಕಳ್ಳತನ



**ಜೇವರ್ಗಿ,ಜ.21**–ಇಲ್ಲಿನ ಬಸ್ ನಿಲ್ದಾಣದಲ್ಲಿ ರಾಸಣಗಿ ಗ್ರಾಮಕ್ಕೆ ಹೋಗುವ ಬಸ್ ಹತ್ತುವ ವೇಳೆ ವೃದ್ಧೆಯೊಬ್ಬರ ಕಿವಿಯೋಲೆ, ವೃದ್ಧಾಪ್ಯ ವೇತನದ 2,400 ರೂ.ನಗದು ಕಳ್ಳತನ ಮಾಡಿರುವ ಘಟನೆ ನಡೆದಿದೆ.

ರಾಸಣಗಿ ಗ್ರಾಮದ ನಿಂಗಮ್ಮ ಪೂಜಾರಿ ಎಂಬ ವೃದ್ಧೆಯ ಸುಮಾರು ಒಂದು ತೊಲೆಯ ಚಿನ್ನಾಭರಣ ಮತ್ತು 2,400 ರೂ.ನಗದು ಹಣವನ್ನು ಕಳ್ಳರು ಕಳವು ಮಾಡಿದ್ದಾರೆ.

ಇವರು ವೃದ್ಧಾಪ್ಯ ವೇತನ ತೆಗೆದುಕೊಂಡು ಹೋಗಲೆಂದು ರಾಸಣಗಿ ಗ್ರಾಮದಿಂದ ಜೇವರ್ಗಿಗೆ ಬಂದು ವೃದ್ಧಾಪ್ಯ ವೇತನದ ಹಣ ತೆಗೆದುಕೊಂಡು ಮರಳಿ ರಾಸಣಗಿ ಹೋಗಲು ಬಸ್ ಹತ್ತುತ್ತಿದ್ದ ವೇಳೆ ಕಳ್ಳರು ಇವರ ಕಿವಿಯಲ್ಲಿನ ಓಲೆ ಮತ್ತು ನಗದು ಹಣ ಕಳವು ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಸುದ್ದಿ ತಿಳಿದು ವೃದ್ಧೆಯ ಪುತ್ರ, ಗ್ರಾಮ ಪಂಚಾಯತಿ ಮಾಜಿ ಸದಸ್ಯ ಪರಮಣ್ಣ ಪೂಜಾರಿ ಅವರು ಸ್ಥಳಕ್ಕೆ ಧಾವಿಸಿ ಈ ಸಂಬಂಧ ಜೇವರ್ಗಿ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ ನಡೆದಿದೆ.

# ನಾಸಾ ಗಗನಯಾತ್ರಿ ಸುನೀತಾ ನಿವೃತ್ತಿ



**ವಾಷಿಂಗ್ಟನ್,ಜ.21–**ನಾಸಾದ ಅತ್ಯಂತ ಅನುಭವಿ ಗಗನಯಾತ್ರಿ ಸುನೀತಾ ವಿಲಿಯಮ್ಸ್ 27 ವರ್ಷಗಳ ಸೇವೆಯ ನಂತರ ನಿವೃತ್ತಿ ಘೋಷಿಸಿದ್ದಾರೆ.

ಭಾರತೀಯ ಮೂಲದ ಸುನೀತಾ ಅವರ ನಿವೃತ್ತಿ ಆದೇಶವು ಕಳೆದ ವರ್ಷ ಡಿಸೆಂಬರ್‌ನಿಂದ ಜಾರಿಗೆ ಬಂದಿದೆ ಎಂದು ಯುಎಸ್ ಬಾಹ್ಯಾಕಾಶ ಸಂಸ್ಥೆ ನಾಸಾ ಮಂಗಳವಾರ ತಿಳಿಸಿದೆ.

ವಿಲಿಯಮ್ಸ್ ಮೂರು ಬಾಹ್ಯಾಕಾಶ ಯಾನಗಳಲ್ಲಿ 608 ದಿನಗಳನ್ನು ಬಾಹ್ಯಾಕಾಶದಲ್ಲಿ ಕಳೆದಿದ್ದಾರೆ. ಅವರು ಅನೇಕ ಐತಿಹಾಸಿಕ ದಾಖಲೆಗಳನ್ನು ತಮ್ಮ ಹೆಸರಿಗೆ ಬರೆದಿದ್ದಾರೆ. ಅವರ ನಿವೃತ್ತಿಯನ್ನು ಬಾಹ್ಯಾಕಾಶ ಹಾರಾಟದ ಒಂದು ಯುಗದ ಅಂತ್ಯವೆಂದು ಪರಿಗಣಿಸಲಾಗಿದೆ.ಅವರು ನಿವೃತ್ತಿಯ ನಂತರ ಭಾರತಕ್ಕೆ ಬಂದು ಬಾಹ್ಯಾಕಾಶ ವಿಜ್ಞಾನದಲ್ಲಿ ಮಾರ್ಗದರ್ಶನ ನೀಡಬೇಕೆಂದು ಹಲವರ ಬಯಕೆಯಾಗಿದೆ.

ನಾಸಾ ಪ್ರಕಾರ, ಸುನೀತಾ ವಿಲಿಯಮ್ಸ್ ಒಟ್ಟು 608 ದಿನಗಳನ್ನು ಬಾಹ್ಯಾಕಾಶದಲ್ಲಿ ಕಳೆದಿದ್ದಾರೆ. ಅವರು ಯಾವುದೇ ಇತರ ಗಗನಯಾತ್ರಿಗಳಿಗಿಂತ ಹೆಚ್ಚು ಬಾರಿ ಬಾಹ್ಯಾಕಾಶ ನಿಲ್ದಾಣದಲ್ಲಿದ್ದರು. ಅವರು ಬಾಹ್ಯಾಕಾಶದಲ್ಲಿ 9 ಬಾಹ್ಯಾಕಾಶ ನಡಿಗೆಗಳನ್ನು ಮಾಡಿದರು. ಅವುಗಳ ಅವಧಿ 62 ಗಂಟೆ 6 ನಿಮಿಷಗಳು. ಇದು ಮಹಿಳಾ ಗಗನಯಾತ್ರಿಯೊಬ್ಬರು ಬಾಹ್ಯಾಕಾಶದಲ್ಲಿ ಅತಿ ಹೆಚ್ಚು ನಡೆದ ದಾಖಲೆಯಾಗಿದೆ. ಒಟ್ಟಾರೆ ನಡಿಗೆ ದಾಖಲೆಯಲ್ಲಿ ಅವರು ನಾಲ್ಕನೇ ಸ್ಥಾನದಲ್ಲಿದ್ದಾರೆ. ಇದು ಮಾತ್ರವಲ್ಲದೆ, ಬಾಹ್ಯಾಕಾಶದಲ್ಲಿ ಮ್ಯಾರಥಾನ್ ಓಡಿದ ಮೊದಲ ಗಗನಯಾತ್ರಿ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ.

ನಾಸಾ ಆಡಳಿತಾಧಿಕಾರಿ ಜೇರೆಡ್ ಐಸಾಕ್‌ಮನ್ ಅವರು ಸುನೀತಾ ವಿಲಿಯಮ್ಸ್ ಅವರನ್ನು ಮಾನವ ಬಾಹ್ಯಾಕಾಶ ಹಾರಾಟದ ಪ್ರವರ್ತಕ ಎಂದು ಕರೆದರು ಮತ್ತು ಬಾಹ್ಯಾಕಾಶ ನಿಲ್ದಾಣದಲ್ಲಿ ಅವರ ನಾಯಕತ್ವವು ಭವಿಷ್ಯಕ್ಕೆ ಉತ್ತಮ ಅಡಿಪಾಯವನ್ನು ಹಾಕಿದೆ ಎಂದು ಹೇಳಿದ್ದಾರೆ. ಅವರ ಕೊಡುಗೆಗಳು ಚಂದ್ರನ ಆರ್ಟೆಮಿಸ್ ಕಾರ್ಯಾಚರಣೆ ಮತ್ತು ಮಂಗಳ ಗ್ರಹಕ್ಕೆ ಭವಿಷ್ಯದ ಕಾರ್ಯಾಚರಣೆಗಳನ್ನು ವೇಗಗೊಳಿಸಿವೆ ಎಂದು ಅವರು ವಿವರಿಸಿದ್ದಾರೆ.

ಸುನೀತಾ ವಿಲಿಯಮ್ಸ್ ಮೊದಲ ಬಾರಿಗೆ ಡಿಸೆಂಬರ್ 2006 ರಲ್ಲಿ ಬಾಹ್ಯಾಕಾಶ ನೌಕೆ ಡಿಸ್ಕವರಿಯಲ್ಲಿ ಬಾಹ್ಯಾಕಾಶಕ್ಕೆ ಹಾರಿದರು. ನಂತರ 2012 ರಲ್ಲಿ, ಅವರು ಕಝಾಕಿಸ್ತಾನದ ಬೈಕೊನೂರ್ ಕಾಸ್ಮೋಡ್ರೋಮ್‌ನಿಂದ ಬಾಹ್ಯಾಕಾಶಕ್ಕೆ ಪ್ರಯಾಣ ಬೆಳೆಸಿದರು. ಅವರು ಸ್ವಲ್ಪ ಸಮಯದವರೆಗೆ ಬಾಹ್ಯಾಕಾಶ ನಿಲ್ದಾಣದ ಕಮಾಂಡರ್ ಆಗಿದ್ದರು. ಕೆಲವು ದಿನಗಳ ಹಿಂದೆ, ಅವರು ಜೂನ್ 2024 ರಲ್ಲಿ ಬೋಯಿಂಗ್ ಸ್ಟಾರ್‌ಲೈನರ್ ಕಾರ್ಯಾಚರಣೆಯ ಭಾಗವಾಗಿ ಬಾಹ್ಯಾಕಾಶ ತಲುಪಿದರು. ಅವರು ಮಾರ್ಚ್ 2025 ರಲ್ಲಿ ಭೂಮಿಗೆ ಮರಳಿದ್ದಾರೆ. ನಾಸಾದ ಜಾನ್ಸನ್ ಬಾಹ್ಯಾಕಾಶ ಕೇಂದ್ರದ ನಿರ್ದೇಶಕಿ ವನೆಸ್ಸಾ ವೈಚೆ, ಸುನೀತಾ ಅವರ ವೃತ್ತಿಜೀವನ, ನಾಯಕತ್ವದ ಗುಣಗಳು, ಕಾರ್ಯಾಚರಣೆಗೆ ತಮ್ಮನ್ನು ತಾವು ಅರ್ಪಿಸಿಕೊಳ್ಳುವ ಗುಣ, ಅವರ ಧೈರ್ಯ ಮತ್ತು ಸಾಹಸವನ್ನು ಶ್ಲಾಘಿಸಿದ್ದಾರೆ. ಅನೇಕರು ಬಾಹ್ಯಾಕಾಶಕ್ಕೆ ಹಾರಲು ಸ್ಫೂರ್ತಿ ಪಡೆಯುತ್ತಾರೆ ಎಂದು ಅವರು ಆಶಾವಾದ ವ್ಯಕ್ತಪಡಿಸಿದರು.

60 ವರ್ಷದ ಅವರು ಖಾಸಗಿ ವಲಯದಲ್ಲಿ ಕೆಲಸ ಮಾಡಲು ಮುಕ್ತರಾಗಿದ್ದಾರೆ, ಮೂರು ವಿಭಿನ್ನ ರಾಕೆಟ್‌ಗಳನ್ನು ಬಳಸಿಕೊಂಡು 608 ದಿನಗಳನ್ನು ಬಾಹ್ಯಾಕಾಶದಲ್ಲಿ ಕಳೆದಿದ್ದಾರೆ. ಅವರು 9 ಬಾಹ್ಯಾಕಾಶ ನಡಿಗೆಗಳನ್ನು ಸಹ ಪೂರ್ಣಗೊಳಿಸಿದ್ದಾರೆ, ಒಟ್ಟು 62 ಗಂಟೆಗಳ ಕಾಲ ಬಾಹ್ಯಾಕಾಶದಲ್ಲಿ ಕಳೆದಿದ್ದಾರೆ.

ಸುನೀತಾ ವಿಲಿಯಮ್ಸ್ ಅವರ ತಂದೆ ದೀಪಕ್ ಪಾಂಡ್ಯ ಭಾರತದ ಗುಜರಾತ್‌ನ ಪ್ರಸಿದ್ಧ ನರವಿಜ್ಞಾನಿಗಳಾಗಿದ್ದರೆ, ಅವರ ತಾಯಿ ಉರ್ಸುಲಿನ್ ಬೋನಿ ಪಾಂಡ್ಯ ಸ್ಲೋವೇನಿಯನ್–ಅಮೇರಿಕನ್ ಮೂಲದವರು.

# ಗಡಿನಾಡಿನಲ್ಲಿ ಅಕ್ಷರ ದೀಪ ಹಚ್ಚಲಿರುವ ವೀರಲೋಕ ಪುಸ್ತಕ ಸಂತೆ : ಶಿವಶರಣಪ್ಪಾ ವಾಲಿ ಶ್ಲಾಘನ



**ಬೀದರ್: ಜ.21–**ಗಡಿನಾಡು ಬೀದರ ಜಿಲ್ಲೆಯ ಸಾಂಸ್ಕೃತಿಕ ಚಹರೆಯನ್ನು ಬದಲಿಸಿ, ಕನ್ನಡದ ಅಸ್ಮಿತೆಯನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಆಯೋಜಿಸಲಾಗಿರುವ ವೀರಲೋಕ ಪುಸ್ತಕ ಸಂತೆ ಅತ್ಯಂತ ಶ್ಲಾಘನೀಯವಾಗಿದೆ ಎಂದು ಹಿರಿಯ ಪತ್ರಕರ್ತ ಶಿವಶರಣಪ್ಪಾ ವಾಲಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಓದುವ ಸಂಸ್ಕೃತಿಯನ್ನು ಮರುಜೀವಗೊಳಿಸುವ ಈ ಸಾಂಸ್ಕೃತಿಕ ಚಳವಳಿಯ ಭಿತ್ತಿಪತ್ರವನ್ನ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಗಡಿನಾಡು ಬೀದರನಲ್ಲಿ ಕನ್ನಡವನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ವೀರಲೋಕ ಪುಸ್ತಕ ಸಂತೆಯು ಅತ್ಯಂತ ಸೂಕ್ತ ಹಾಗೂ ಅವಶ್ಯಕವಾದ ಕಾರ್ಯಕ್ರಮವಾಗಿದೆ, ಕನ್ನಡಕ್ಕಾಗಿ ಹಿರೇಮಠ ಸಂಸ್ಥಾನ ಭಾಲ್ಕಿಯ ಕೊಡುಗೆ ಅಪಾರವಾದದ್ದು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಈ ಭಾಗದಲ್ಲಿ ಕನ್ನಡ ಕಟ್ಟುವ ಕೆಲಸವನ್ನು ಅವಿರತವಾಗಿ ಮಾಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ, ಪುಸ್ತಕ ಸಂತೆ ರಚನಾತ್ಮಕ ಕಾರ್ಯಕ್ರಮವಾಗಿದ್ದು, ಇಂತಹ ಪ್ರಯತ್ನಗಳು ನಿರಂತರವಾಗಿ ರಾಜ್ಯದೆಲ್ಲೆಡೆ ನಡೆಯಬೇಕಿದೆ ಜಿಲ್ಲೆಯ ಸಮಸ್ತ ಓದುಗರು ಮತ್ತು ಕನ್ನಡಾಭಿಮಾನಿಗಳು ಈ ಮೂರು ದಿನಗಳ ಅಕ್ಷರ ಹಬ್ಬದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದರು.

ಬೀದರ ಜಿಲ್ಲೆಯು ಶೈಕ್ಷಣಿಕವಾಗಿ ವೇಗವಾಗಿ ಮುನ್ನಡೆಯುತ್ತಿದ್ದು, ಈ ಪ್ರಗತಿಗೆ ಪುಸ್ತಕ ಸಂತೆಯಂತಹ ಜ್ಞಾನದ ಕಾರ್ಯಕ್ರಮಗಳು ಪೂರಕವಾಗಿವೆ ಎಂದು ಹಿರಿಯ ಶೈಕ್ಷಣಿಕ ತಜ್ಞರು ಹೆಚ್.ಕೆ.ಇ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಡಾ. ರಜನೀಶ್ ವಾಲಿ ಅವರು ಹೇಳಿದರು.

ಇಂತಹ ವಿಶಿಷ್ಟ ಸಂಘಟನೆಯನ್ನು ಮಾಡಿರುವ ಹಿರೇಮಠ ಸಂಸ್ಥಾನ ಭಾಲ್ಕಿ, ಜಿಲ್ಲಾ ಕಸಾಪ, ಗುರುನಾಥ ರಾಜಗೀರಾ ಅವರಿಗೆ ಅಭಿನಂದನೆಗಳು ಇಂತಹ ಸಮಾಜಮುಖಿ ಕಾರ್ಯಕ್ಕೆ ಉತ್ತರ ಕರ್ನಾಟಕ ನ್ಯೂಸ್ ಜೊತೆಯಾಗಿ ಸೇವೆಗೈಯಲು ಹೆಮ್ಮೆ ಎನಿಸುತ್ತದೆ ಎಂದರು.

ಜಿಲ್ಲೆಯ ಯುವಶಕ್ತಿಯು ಪುಸ್ತಕ ಸಂತೆಯ ಸದುಪಯೋಗವನ್ನು ಪಡೆದುಕೊಂಡು ಪುಸ್ತಕಗಳೊಂದಿಗೆ ಒಡನಾಟ ಬೆಳೆಸಿಕೊಳ್ಳುವ ಮೂಲಕ ಜ್ಞಾನವಂತರಾಗಬೇಕು ಎಂದು ಅವರು ಯುವ ಸಮೂಹಕ್ಕೆ ಕಿವಿಮಾತು ಹೇಳಿದರು.

ಕನ್ನಡದ ಉಸಿರನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿರುವ ಉತ್ತರ ಕರ್ನಾಟಕ ನ್ಯೂಸ್ ವೀರಲೋಕದ ಪುಸ್ತಕ ಸಂತೆಯೊಂದಿಗೆ ಸಹಭಾಗಿತ್ವ ಹೊಂದಲು ಹೆಮ್ಮೆ ಪಡುತ್ತದೆ ಎಂದು ಚಾನೆ???ನ ಮುಖ್ಯಸ್ಥರಾದ ಆದೀಶ ರಜನೀಶ್ ವಾಲಿ ಅವರು ತಿಳಿಸಿದರು.

ಪುಸ್ತಕ ಸಂತೆಯ ಯಶಸ್ವಿಗಾಗಿ ಉತ್ತರ ಕರ್ನಾಟಕ ನ್ಯೂಸ್ ಪೂರ್ಣ ಪ್ರಮಾಣದಲ್ಲಿ ತೊಡಗಿಸಿಕೊಳ್ಳಲಿದೆ ಅಕ್ಷರ ಲೋಕದ ಗಣ್ಯರು, ಪತ್ರಕರ್ತರು, ಸಾಹಿತಿಗಳುಮತ್ತು ವಿದ್ಯಾರ್ಥಿಗಳು ಸೇರಿದಂತೆ ಅಖಂಡ ಕರ್ನಾಟಕದ ಓದುಗರು ಸೇರಲಿರುವ ಈ ಹಬ್ಬದಲ್ಲಿ ಜಿಲ್ಲೆಯ ಜನತೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಅವರು ವಿನಂತಿಸಿದರು.

ಈ ಪುಸ್ತಕ ಸಂತೆಯು ಜನವರಿ 24,25 ಮತ್ತು 26ರಂದು ಬೀದರ ನಗರದ ಸಾಯಿ ಸ್ಕೂಲ್ ಗ್ರೌಂಡನಲ್ಲಿ ವಿಜೃಂಭಣೆಯಿಂದ ನಡೆಯಲಿದೆ. ಐವತ್ತಕ್ಕೂ ಹೆಚ್ಚು ಮಳಿಗೆಗಳು, ನೂರಕ್ಕೂ ಹೆಚ್ಚು ಪ್ರಕಾಶಕರು ಮತ್ತು ನೂರಾರು ಲೇಖಕರು ಒಂದೇ ಸೂರಿನಡಿ ಸೇರಲಿದ್ದಾರೆ. ಈ ಸಂತೆಯು ಬರಿಯ ಪುಸ್ತಕ ಪ್ರದರ್ಶನವಲ್ಲದೆ, ಆಹಾರ ಸಂತೆ, ವಾಣಿಜ್ಯ ಮಳಿಗೆಗಳು, ಮಕ್ಕಳ ಸಂತೆ, ಸಂವಾದ ಗೋಷ್ಠಿಗಳು ಮತ್ತು ಲೇಖಕರೊಂದಿಗೆ ನೇರ ಒಡನಾಟಕ್ಕೆ ಅವಕಾಶ ಮಾಡಿಕೊಡಲಿದೆ. ಈ ಜ್ಞಾನದ ಹಬ್ಬದಲ್ಲಿ ಎಲ್ಲರೂ ಪಾಲ್ಗೊಂಡು ಅಕ್ಷರ ಸಂಸ್ಕೃತಿಯನ್ನು ಬೆಳೆಸಬೇಕೆಂದು ಜಿಲ್ಲಾ ಕಸಾಪ ಅಧ್ಯಕ್ಷರಾದ ಸುರೇಶ ಚನ್ನಶೆಟ್ಟಿ ಹಾಗೂ ಆಯೋಜಕರಾದ ಗುರುನಾಥ ರಾಜಗೀರಾ ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಪ್ರಮುಖರಾದ ರೇವಣಸಿದ್ದಪ್ಪಾ ಜಲಾದೆ,ಶಿವಶಂಕರ ಟೋಕರೆ,ಡಾ.ಬಸವರಾಜ ಬಲ್ಲೂರ, ಗುರುನಾಥ ಅಕ್ಕಣ್ಣಾ ಉಪಸ್ಥಿತರಿದ್ದರು.

# ಬಜೆಟ್‌ನಲ್ಲಿ ಮಲತಾಯಿ ಧೋರಣೆ ಮಾಡದೆ ನಿಜತಾಯಿ ಧೋರಣೆ ಅನುಸರಿಸಲು ದುಂಡು ಮೇಜಿನ ಸಭೆಯ ಒತ್ತಾಯ



**ಕಲಬುರಗಿ,ಜ.21–**ಕೇಂದ್ರ ಸರ್ಕಾರ ನಿರಂತರವಾಗಿ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಅಭಿವೃದ್ಧಿ ವಿಷಯಕ್ಕೆ ಸಂಬಂಧಿಸಿ ಬಜೆ???ನಲ್ಲಿ ಮಲತಾಯಿ ಧೋರಣೆ ಅನುಸರಿಸುತ್ತಿರುವುದು ಖೇದಕರ್ ಸಂಗತಿಯಾಗಿದೆ. ಬರುವ ಬಜೆಟ್‌ನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ಘೋಷಣೆ ಮಾಡಿದ ಯೋಜನೆಗಳ ಅನುಷ್ಠಾನ ಮತ್ತು ಹೊಸ ಯೋಜನೆಗಳ ಬಗ್ಗೆ ಬರುವ ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಸಿಹಿ ಸುದ್ದಿ ನೀಡಬೇಕೆಂದು ದುಂಡು ಮೇಜಿನ ಸಭೆ ಒತ್ತಾಯಿಸಿದೆ.

ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವಾಧ್ಯಕ್ಷರಾದ ಅಧ್ಯಕ್ಷರಾದ ಬಸವರಾಜ ದೇಶಮುಖರವರ ಅಧ್ಯಕ್ಷತೆಯಲ್ಲಿ ಶರಣ ಬಸವ ವಿಶ್ವವಿದ್ಯಾನಿಲಯದ ಸಭಾಂಗಣದಲ್ಲಿ ದುಂಡು ಮೇಜಿನ ಸಭೆ ನಡೆಸಿ ಪ್ರಮುಖ ಅಭಿವೃದ್ಧಿ ಯೋಜನೆಗಳು ಕಲ್ಯಾಣ ಕರ್ನಾಟಕಕ್ಕೆ ಮಂಜೂರು ಮಾಡಲು ಆಗ್ರಹಿಸಿದೆ.

ಸಭೆ ಆರಂಭಕ್ಕೂ ಪೂರ್ವ ಕಲ್ಯಾಣ ಕರ್ನಾಟಕ ಪ್ರದೇಶದ ಹಿರಿಯ ಮುತ್ಸದ್ದಿ ವಿಮೋಚನಾ ಹೋರಾಟಗಾರ, ಲೋಕನಾಯಕ ಭೀಮಣ್ಣ ಖಂಡ್ರೆ ರವರ ನಿಧನ ನಿಮಿತ್ಯ ಸಂತಾಪ ಸಲ್ಲಿಸಿ ಭೀಮಣ್ಣ ಖಂಡ್ರೆರವರ ಅಪಾರ ಕೂಡುಗೆ ಬಗ್ಗೆ ಚರ್ಚಿಸಿ ನಂತರ ಸಮಿತಿಯ ಸಂಸ್ಥಾಪಕ ಅಧ್ಯಕ್ಷರಾದ ಡಾ ಲಕ್ಷ್ಮಣ ದಸ್ತಿ ಮತ್ತು ಪರಿಣಿತ ತಜ್ಞರಾದ ಪ್ರೊ .ಆರ್ ಕೆ ಹುಡುಗಿ,ಡಾ ಕಿರಣ್ ದೇಶಮುಖ,ಪ್ರೊ ಬಸವರಾಜ ಕುಮ್ನೂರ, ಪ್ರೊ.ಬಸವರಾಜ ಗುಲಶೆಟ್ಟಿ ರಾಜ್ಯ ನೀತಿ ಆಯೋಗದ ಸದಸ್ಯರು ಮತ್ತು ಗೋವಿಂದರಾವ ನೇತೃತ್ವದ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿಯ ಸದಸ್ಯರಾದ ಶ್ರೀಮತಿ ಸಂಗೀತಾ ಕಟ್ಟಿ, ಕೈಲಾಸನಾಥ ದೀಕ್ಷಿತ್,ಬಿ.ಬಿ.ನಾಯಕ, ಡಾ ಗಾಂಧೀಜಿ ಮೋಳಕೇರೆ,ಡಾ. ಸನಾಉಲ್ಲಾ,ಡಾ.ಮಾಜೀದ ದಾಗಿ, ಡಾ.ಸದಾನಂದ ಪೆರ್ಲಾ ಸೇರಿದಂತೆ ಪ್ರಮುಖ ಪರಿಣಿತ ತಜ್ಞರು ಕೇಂದ್ರ ಬಜೆಟ್ ನಲ್ಲಿ ಆಗಬೇಕಾದ ಅಭಿವೃದ್ಧಿ ವಿಷಯಗಳು ಮಂಡಿಸಿದರು. ದುಂಡು ಮೇಜಿನ ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಿ ಕೇಂದ್ರ ಸರ್ಕಾರ ಬರುವ ಬಜೆಟ್ ನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಭಾರತ ಸರ್ಕಾರ 371ನೇ ಜೇ ಕಲಂ ಜಾರಿ ಮಾಡಿರುವಂತೆ ಇಲ್ಲಿನ ಹಿಂದುಳುವಿಕೆ ಹೋಗಲಾಡಿಸಲು ಮತ್ತು ಪ್ರಾದೇಶಿಕ ಅಸಮತೋಲನೆ ನಿವಾರಣೆಗೆ ಕಲ್ಯಾಣಕ್ಕೆ ವಿಶೇಷ ಪ್ಯಾಕೇಜ್ ಹಣ ಮಂಜೂರು ಮಾಡಲು, ಕಲಬುರಗಿ ರೈಲ್ವೆ ವಿಭಾಗೀಯ ಕಚೇರಿ ಸ್ಥಾಪಿಸಲು, ಕೃಷ್ಣಾ ಯೋಜನೆ ಕೇಂದ್ರ ಸರ್ಕಾರದ ಸುಪುರ್ತಿಗೆ ತೆಗೆದುಕೊಳ್ಳಲು,ಕಲ್ಯಾಣ ಕರ್ನಾಟಕದ ಮಹಾತ್ವಾಕಾಂಕ್ಷಿ ಜಿಲ್ಲೆ ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ, ಕಲ್ಯಾಣದಲ್ಲಿ ಐಐಟಿ ಸ್ಥಾಪನೆ, ಗುಜರಾತ ಮತ್ತು ಮಹಾರಾಷ್ಟ್ರ ರಾಜ್ಯಗಳ ಮಾದರಿಯಲ್ಲಿ ಇರುವಂತೆ ಗುಜರಾತ್ ಕ್ರಿಕೆಟ್ ಸಂಘ, ಸೌರಾಷ್ಟ್ರ ಕ್ರಿಕೆಟ್ ಸಂಘ, ಬರೋಡಾ ಕ್ರಿಕೆಟ್ ಸಂಘ ಅದರಂತೆ ಮಹಾರಾಷ್ಟ್ರದಲ್ಲಿ ಮಹಾರಾಷ್ಟ್ರ ಕ್ರಿಕೆಟ್ ಸಂಘ, ಮುಂಬಯಿ ಕ್ರಿಕೆಟ್ ಸಂಘ, ವಿಧರ್ಭ ಕ್ರಿಕೆಟ್ ಸಂಘಗಳ ಮಾದರಿಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಕ್ಕೂ ಪ್ರತ್ಯೇಕ ಕ್ರಿಕೆಟ್ ಸಂಘ ರಚನೆ ಮಾಡಿ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಪ್ರತ್ಯೇಕ ರಣಜಿ ತಂಡ ರಚನೆ ಮಾಡಲು ಅದರಂತೆ ಬೀದರ ಕಲಬುರಗಿ ವಿಜಾಪೂರ ರಸ್ತೆ,ಬೀದರ ಶ್ರೀರಂಗಪಟ್ಟಣ ರಸ್ತೆ, ಆಳಂದ ಲಾತೂರ ರಸ್ತೆಗಳು ಚತುಷ್ಪಥ ರಸ್ತೆಗಳನ್ನಾನ್ನಾಗಿ ಮೇಲ್ದರ್ಜೆಗೇರಿಸಿ ಅಭಿವೃದ್ಧಿಗೆ ಮಂಜೂರಾತಿ ನೀಡಲು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಮನ್ವಯತೆಯಿಂದ ಕಲಬುರಗಿ ಎರಡನೇ ವರ್ತುಲ ರಸ್ತೆ ನಿರ್ಮಾಣ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ರೈಲ್ವೆ ಕ್ಷೇತ್ರದಲ್ಲಿ ತಾಜಸುಲ್ತಾನಪೂರ ವಾಡಿ ರೈಲ್ವೆ ಮಾರ್ಗ ಮಧ್ಯೆ ರೈಲ್ವೆ ದಿಂದ ದಕ್ಷಿಣ ಮಧ್ಯ ರೈಲ್ವೆ ವಲಯಕ್ಕೆ ವರ್ಗಾಯಿಸಿ ಕಲಬುರಗಿ ರೈಲ್ವೆ ಕ್ಷೇತ್ರದ ಅಭಿವೃದ್ಧಿಗೆ ಸ್ಪಂದಿಸುವುದು ಸೇರಿದಂತೆ ಶ್ರೀಮಂತ ಇತಿಹಾಸದಿಂದ ಮೆರೆದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಇರುವ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಉತ್ತರ ಭಾರತದ ಮಾದರಿಯಲ್ಲಿ ಅಭಿವೃದ್ಧಿ ಪಡಿಸುವ ಯೋಜನೆಗೆ ಮಂಜೂರಾತಿ ನೀಡಲು, ಕಲಬುರಗಿ ವಿಮಾನಯಾನ ಸೇವೆ ಉಡಾನ ಯೋಜನೆಗೆ ಮುಂದುವರಿಸಿ ಕಲಬುರಗಿಯಿಂದ ವಿಮಾನಗಳ ಹಾರಾಟ ಆರಂಭಿಸಲು ದುಂಡು ಮೇಜಿನ ಸಭೆಯ ಮೂಲಕ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದೆ.ಈ ಸಂದರ್ಭದಲ್ಲಿ ಪ್ರಮುಖ ಮುಖಂಡರಾದ ರೌಫ ಖಾದ್ರಿ, ಅಸ್ಲಂ ಚೌಂಗೆ, ಸುಭಾಷ್ ಪಾಂಚಾಳ,ಖಾಜಿ ರಿಜ್ವಾನ್ ಸಿದ್ಧಿಕಿ,ಎಮ್ ಬಿ ನಿಂಗಪ್ಪ,ಸಂಧ್ಯಾರಾಜ, ಮುತ್ತಣ್ಣ ನಡಗೇರಿ,ಮೋಹನ ಕಟ್ಟಿಮನಿ,ಡಾ ಮಂಜೂರು ಡೆಕ್ಕನಿ, ಮಲ್ಲಪ್ಪ, ವಿನೋದ ಚವ್ಹಾಣ, ಶರಣಬಸಪ್ಪ.ಕೆ.ಶ್ರೀಕಾಂತ ದೇಸಾಯಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಮಕ್ಕಳಲ್ಲಿನ ಪ್ರತಿಭೆ ಹೊರಹಾಕಲು ಪ್ರತಿಭಾ ಕಾರಂಜಿ ಉತ್ತಮ ವೇದಿಕೆ:ಫ್ರಾನ್ಸಿಸ್



**ಬಳ್ಳಾರಿ,ಜ.21–** ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಇದೊಂದು ಉತ್ತಮ ವೇದಿಕೆಯಾಗಿದೆ ಎಂದು ಸಂತ ಜಾನರ ವಿದ್ಯಾಸಂಸ್ಥೆಯ ವ್ಯವಸ್ಥಾಪಕರು ಹಾಗೂ ಪತ್ರ ವ್ಯವಹಾರಾಧಿಕಾರಿ ಫಾದರ್ ಫ್ರಾನ್ಸಿಸ್.ಬಿ ಅವರು ಹೇಳಿದರು.ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕೋಟೆ ಪ್ರದೇಶದಲ್ಲಿರುವ ಸಂತಜಾನ್ ಪ್ರೌಢಶಾಲೆ ಆವರಣದಲ್ಲಿ ಮಂಗಳವಾರ ಏರ್ಪಡಿಸಿದ್ದ 2025–26ನೇ ಸಾಲಿನ ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಮಕ್ಕಳು ಶಾಲೆಗೆ ಬಂದಾಗ ಅವರ ಪ್ರತಿಭೆಗಳನ್ನು ಗುರುತಿಸುವವರೇ ಶಿಕ್ಷಕರು. ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ನಮ್ಮ ಶಾಲೆಯಲ್ಲಿ ಆಯೋಜಿಸಿರುವುದು ಸಂತಸದ ವಿಷಯವಾಗಿದೆ ಎಂದರು. ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮದ ನೋಡೆಲ್ ಅಧಿಕಾರಿ ಹಾಗೂ ವಿದ್ಯಾಧಿಕಾರಿ ಲಕ್ಷ್ಮಿದೇವಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಕರು ಮಕ್ಕಳಲ್ಲಿ ಅಡಕವಾಗಿರುವ ಕಲೆಗಳನ್ನು ಪ್ರೋತ್ಸಾಹಿಸಬೇಕು. ಪ್ರತಿಭಾ ಕಾರಂಜಿ ಕಾರ್ಯಕ್ರಮದ ಸದುಪಯೋಗವನ್ನು ಮಕ್ಕಳು ಪಡೆದುಕೊಳ್ಳಬೇಕು ಎಂದರು.ಬಳ್ಳಾರಿ ಪೂರ್ವ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಕಸ್ತೂರಿ ಅವರು ಮಾತನಾಡಿ, ಒಂದು ಮಗುವಿನಲ್ಲಿನ ಕಲೆ ಹಾಗೂ ಪತ್ರಿಭೆ ಬಾಲ್ಯದಲ್ಲಿಯೇ ಬಿಂಬಿತಗೊಳ್ಳುತ್ತವೆ. ಅವುಗಳನ್ನು ಪ್ರದರ್ಶಿಸಲು ಉತ್ತಮ ವೇದಿಕೆ ಮತ್ತು ಗುರುತಿಸುವ ಪೋಷಕರು, ಶಿಕ್ಷಕರು ಮುಖ್ಯವಾಗುತ್ತಾರೆ ಎಂದು ಹೇಳಿದರು.ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಕೊಟ್ರೇಶ್ ಅವರು ಪ್ರಸ್ತಾವಿಕವಾಗಿ ಮಾತನಾಡಿ, ಮಕ್ಕಳು ಕೇವಲ ಆಟ–ಪಾಠಕ್ಕೆ ಸೀಮಿತರಾಗಬಾರದು; ಬದಲಾಗಿ ತಮ್ಮಲ್ಲಿನ ಸೂಕ್ತ ಪ್ರತಿಭೆಯನ್ನು ಸಹ ಹೊರಹಾಕಬೇಕು. ಮಕ್ಕಳಲ್ಲಿರುವ ಪ್ರತಿಭೆಯನ್ನು ನಾವು ಊಹಿಸಲು ಸಾಧ್ಯವಾಗಿರುವುದಿಲ್ಲ. ಹಾಗಾಗಿ ಪ್ರತಿಭಾ ಕಾರಂಜಿ ಕಾರ್ಯಕ್ರಮದಿಂದ ಮಕ್ಕಳ ಪ್ರತಿಭೆಗಳ ಅನಾವರಣ ಸಾಧ್ಯವಾಗುತ್ತದೆ ಎಂದು ಹೇಳಿದರು.ಜಿಲ್ಲಾ ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ನಿಂಗಪ್ಪ ಅವರು ಮಾತನಾಡಿ, ಶಾಲಾ ಮಕ್ಕಳಿಗೆ ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಿಗೆ ಒತ್ತು ನೀಡುವ ಕೆಲಸ ಶಿಕ್ಷಕರು ಮಾಡಬೇಕು. ಪಾಠದ ಜತೆಗೆ ಕಲೆ ಮತ್ತು ಸಂಸ್ಕೃತಿಯನ್ನು ಅತ್ಯಂತ ಪರಿಣಾಮಕಾರಿಯಾಗಿ ತಿಳಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿಗೆ ನಿಯೋಜಿತರಾದ ತೀರ್ಪುಗಾರರರು ಅತ್ಯಂತ ನಿಷ್ಪಕ್ಷಪಾತವಾಗಿ ಪ್ರತಿಭಾವಂತರನ್ನು ಆಯ್ಕೆ ಮಾಡಬೇಕು. ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಆಯ್ಕೆಯಾದ ಪ್ರತಿಭೆಗಳು ರಾಜ್ಯಮಟ್ಟದಲ್ಲಿ ನಡೆಯುವ ಪ್ರತಿಭಾ ಕಾರಂಜಿಯಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.ನಮ್ಮ ಜಿಲ್ಲೆಯ ಹೆಚ್ಚಿನ ಮಕ್ಕಳು ರಾಜ್ಯಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಮಿಂಚಿ, ಹೆಚ್ಚಿನ ಪ್ರಶಸ್ತಿಗಳನ್ನು ತರುವುದರ ಮೂಲಕ ಜಿಲ್ಲೆಗೆ ಕೀರ್ತಿ ತನ್ನಿ ಎಂದು ಶುಭ ಹಾರೈಸಿದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಮಟ್ಟದಲ್ಲಿ ಶಾಲಾ ಮತ್ತು ಪ್ರೌಢ ಮಟ್ಟದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ವಿವಿಧ ರೀತಿಯ ಸ್ಪರ್ಧೆಗಳ ವೈಯಕ್ತಿಕ ಹಾಗೂ ಸಾಮೂಹಿಕ ವಿಭಾಗಗಳಲ್ಲಿ ಅವಕಾಶ ಕಲ್ಪಿಸಲಾಗಿತ್ತು.

ಈ ಸಂದರ್ಭದಲ್ಲಿ ಸಂತಜಾನರ ಪ್ರೌಢಶಾಲೆಯ ಮುಖ್ಯಗುರುಗಳಾದ ಶಾಂತುಶೀಲನ್, ಜಿಲ್ಲಾ ವಸ್ತು ವಿಷಯ ಪರಿವೀಕ್ಷಕರಾದ ವೇದಾವತಿ, ಜಿಲ್ಲಾ ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಭಾಸ್ಕರ ರೆಡ್ಡಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಬಳ್ಳಾರಿ ಪೂರ್ವ ವಲಯದ ಕ್ಷೇತ್ರ ಸಮನ್ವಯಾಧಿಕಾರಿ ವಿರೇಶಪ್ಪ, ಜಿಲ್ಲಾ ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಸತ್ಯನಾರಾಯಣ ಸೇರಿದಂತೆ ಡಯಟ್ ಉಪನ್ಯಾಸಕರು, ವಿಷಯ ಪರಿವೀಕ್ಷಕರು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಸರ್ಕಾರಿ, ಅನುದಾನ ರಹಿತ ಶಾಲೆಗಳ ಮುಖ್ಯ ಗುರುಗಳು, ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಪೋಷಕರು, ಇತರರು ಉಪಸ್ಥಿತರಿದ್ದರು.

# ಅಂಬಿಗರ ಚೌಡಯ್ಯ ಜಯಂತೋತ್ಸವ ಆಚರಣೆ

**ಕಲಬುರಗಿ,ಜ.21–** ಶ್ರೀ ಚೌಡೇಶ್ವರ ವಿದ್ಯಾವರ್ಧಕ ಸಂಘದ ಅಡಿಯಲ್ಲಿ ನಡೆಯುವ ಶ್ರೀ ಚೌಡೇಶ್ವರ ಹಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರೌಢ ಶಾಲೆಗಳ ಆವರಣದಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿಯನ್ನು ಬಹು ವಿಜೃಂಭಣೆಯಿಂದ ಆಚರಿಸಲಾಯಿತು. ಸಂಘದ ಅಧ್ಯಕ್ಷರಾದ ಶ್ರೀಮತಿ ಡಾ॥ ಇಂದಿರಾ ಶಕ್ತಿಯವರು ಪೂಜ್ಯ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಭಾವಚಿತ್ರಕ್ಕೆ ಪೂಜೆ ಹಾಗೂ ಮಾಲಾರ್ಪಣೆ ಮಾಡುವ ಮುಖಾಂತರ ಜಯಂತೋತ್ಸವಕ್ಕೆ ಚಾಲನೆ ನೀಡಿದರು.ಈ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ವಚನಗಳು ಹಾಗೂ ಅವರ ನೇರ ನುಡಿಯಿಂದ ಅವರು ಶರಣರಲ್ಲಿ ನಿಜಶರಣ ಎನಿಸಿಕೊಂಡವರು ಹಾಗೆ ಅವರ ವಚನಗಳು ಇಂದಿನ ದಿನಮಾನದಲ್ಲೂ ವರ್ತಮಾನಕ್ಕೆ ಹೋಲಿಕೆಯಾಗುತ್ತದೆ ಮತ್ತು ಅಂಬಿಗರ ಚೌಡಯ್ಯನವರು ಸತ್ಯೆ, ನಿಷ್ಠೆ ಕರ್ತವ್ಯಕ್ಕೆ ಹೆಚ್ಚಿನ ಮಹತ್ವ ಕೊಟ್ಟಿದ್ದರು ಎಂದರು.ಕಾರ್ಯಕ್ರಮದಲ್ಲಿ ಶಾಲೆಗಳ ಮುಖ್ಯೋಪಾಧ್ಯಯರು, ಸಹ ಶಿಕ್ಷಕರು ಎಲ್ಲಾ ವಿದ್ಯಾರ್ಥಿಗಳು ಪಾಲಕರು ಹಾಗೂ



ಕೋಲಿ ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮಕ್ಕೆ ಶೋಭೆಯನ್ನು ತಂದು ಕೊಟ್ಟರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE